# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

10 ಫೆಬ್ರುವರಿ । ಶನಿವಾರ

10 February 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನ್ನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 4 ಸಂಚಿಕೆ – 312 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಐಪಿಎಸ್ ಅಧಿಕಾರಿ ರಾಜೀನಾಮೆ



ಬೆಂಗಳೂರು: ಕರ್ನಾಟಕದ ಹಿರಿಯ ಐಪಿಎಸ್ ಅಧಿಕಾರಿ ಪ್ರತಾಪ್ ರೆಡ್ಡಿ ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ.

ಈ ಹಿಂದೆ ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿಯೂ ಅವರು ಕಾರ್ಯ ನಿರ್ವಹಣೆ ಮಾಡಿದ್ದರು. ಪ್ರಸ್ತುತ ಕರ್ನಾಟಕದ ಆಂತರಿಕ ಭದ್ರತೆ ವಿಭಾಗದ ಡಿಜಿಪಿಯಾಗಿ ಕಾರ್ಯ ನಿರ್ವಹಣೆ ಮಾಡುತ್ತಿದ್ದ ಪ್ರತಾಪ್ ರೆಡ್ಡಿ ಅವರು 1991ನೇ ಬ್ಯಾಚ್ನ ಐಪಿಎಸ್ ಅಧಿಕಾರಿ.

ಅವರು ಮೂಲತಃ ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯವರು. ಪ್ರತಾಪ್ ರೆಡ್ಡಿ ಅವರ ನಿವೃತ್ತಿಗೆ ಎರಡು ತಿಂಗಳು ಬಾಕಿ ಇತ್ತು. ಇಂತಹ ಸಂದರ್ಭದಲ್ಲಿಯೇ ಅವರು ವೈಯಕ್ತಿಕ ಕಾರಣವನ್ನು ನೀಡಿ ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ.

ಈ ರಾಜೀನಾಮೆ ರಾಜ್ಯ ಪೊಲೀಸ್ ವಲಯದಲ್ಲಿ ಕುತೂಹಲಕ್ಕೆ ಕಾರಣವಾಗಿದೆ. ಕಮಲ್ ಪಂತ್ ಅವರ ಬಳಿಕ ಪ್ರತಾಪ್ ರೆಡ್ಡಿ ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿ ನೇಮಕಗೊಂಡಿದ್ದರು. ಬಳಿಕ ಅವರನ್ನು ವರ್ಗಾವಣೆ ಮಾಡಿ ದಯಾನಂದ್ ಅವರನ್ನು ನಗರ ಪೊಲೀಸ್ ಆಯುಕ್ತರಾಗಿ ಸರ್ಕಾರ ನೇಮಕ ಮಾಡಿತ್ತು.

## ದೇಗುಲ ನಿರ್ಮಿಸಿ, ನೀವೇ ಪೂಜಾರಿಗಳಾಗಿ: ಸಿಎಂ



ಚಿತ್ರದುರ್ಗ: ಗರ್ಭಗುಡಿಗೆ ಶ್ರೀಗಳಿಗೆ ನಿರ್ಬಂಧ ವಿಚಾರ ತಿಳಿದು ಬೇಸರವಾಯಿತು. ಶೋಷಿತ ಸಮುದಾಯದ ಜನರು ನೀವೇ ದೇಗುಲ ನಿರ್ಮಿಸಿಕೊಳ್ಳಿ. ನೀವೇ ದೇವಸ್ಥಾನಗಳಲ್ಲಿ ಪೂಜಾರಿಗಳಾಗಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಜಿಲ್ಲೆಯ ಹೊಸದುರ್ಗ ಪಟ್ಟಣದಲ್ಲಿ ನಡೆದ ಉಪ್ಪಾರ ಸಮಾವೇಶದಲ್ಲಿ ಚನ್ನಕೇಶವ ದೇವಸ್ಥಾನದಲ್ಲಿ ಕುರುಬ ಸ್ವಾಮೀಜಿಗೆ ನಿರ್ಬಂಧ ವಿಚಾರವಾಗಿ ಮಾತನಾಡಿದ ಅವರು, ಪಟ್ಟಭದ್ರ–ರಿಂದ ಎಚ್ಚರವಾಗಿರಿ, ಶಿಕ್ಷಣದಿಂದ ವಂಚಿತರನ್ನಾಗಿಸುವ ಕೆಲಸ ಹಿಂದಿನಿಂದಲೂ ನಡೆದಿದೆ. ಮೊದಲು ಶಿಕ್ಷಿತರಾಗಿ ಬಳಿಕ ಸಾಮಾಜಿ–ಕ, ಆರ್ಥಿಕವಾಗಿ ಸಬಲರಾಗಿರಿ. ನಾನು ಚಿಕ್ಕಂದಿನಲ್ಲಿ ಬಾವಿ ನೀರು ತರಲು ಹೋಗುತ್ತಿದ್ದೆನು. ಕಸ ತಿಳಿಗೊಳಿಸಿ ಕೊಡದಲ್ಲಿ ನೀರು ತುಂಬಿಕೊಳ್ಳುತ್ತಿದ್ದೆನು. ಬಳಿಕ ಮತ್ತೆ ನೀರ ಮೇಲೆ ಕಸ ಮುಚ್ಚಿಕೊಳ್ಳುತ್ತಿತ್ತು. ದಾರ್ಶನಿಕರು ಜಾಗೃತಿ ಮೂಡಿಸಿದಾಗ ಜಾತಿ ವ್ಯವಸ್ಥೆ ತಿಳಿಯಾಗಿದೆ. ಬಳಿಕ ಮತ್ತೆ ಜಾತಿ ವ್ಯವಸ್ಥೆ ಗಟ್ಟಿ ಆಗುತ್ತಲೇ ಸಾಗಿದೆ ಎಂದು ಜಾತಿ ವ್ಯವಸ್ಥೆ ಬಗ್ಗೆ ಪಾಠ ಮಾಡಿದ್ದಾರೆ.

ಪ್ರತಿಭೆ ಯಾರ ಸ್ವತ್ತಲ್ಲ, ಜಾತಿಯಿಂದ ಬರುವಂಥದಲ್ಲ. ಮಹಾನ್ ವಿದ್ವಾಂಸ ಅಂಬೇಡ್ಕರ್ ಯಾವ ಜಾತಿಯಲ್ಲಿ ಹುಟ್ಟಿದವರು? ಭಗೀರಥ ಮಹರ್ಷಿ ಶಿವನಿಗೆ ಒಲಿಸಿ ನೀರು ತರಲಿಲ್ಲವೇ ಎಂದು ಪ್ರಶ್ನಿಸಿದ್ದಾರೆ.


ಗ್ಯಾರಂಟಿ ಬಗ್ಗೆ ಟೀಕೆ ಮಾಡ್ತಾರೆ: ಜನಪರ ಯೋಜನೆಗಳನ್ನ ಮಾಡದವರು ಗ್ಯಾರಂಟಿ ಟೀಕಿಸುತ್ತಾರೆ. ಗ್ಯಾರಂಟಿ ಬಗ್ಗೆ ಬಿಜೆಪಿಯವರು ಟೀಕೆ ಮಾಡ್ತಾರೆ, ಹೀಯಾಳಿಸುತ್ತಾರೆ. ಗ್ಯಾರಂಟಿ ಯೋಜನೆಗಳನ್ನ ಯಾವುದೇ ಕಾರಣ–ಕ್ಕೂ ನಿಲ್ಲಿಸಲ್ಲ. ನಾವೆಲ್ಲಾ ಶ್ರೀರಾಮನ ಭಕ್ತರಲ್ಲವೇ, ರಾಮಾಯಣ ಓದಿಲ್ಲವೇ. ಪಿತೃ ವಾಕ್ಯ ಪರಿಪಾಲನೆ, ರಾಮರಾಜ್ಯ ನಿರ್ಮಿಸಿದ್ದಕ್ಕೆ ಶ್ರೀರಾಮನ ಪೂಜಿಸುತ್ತೇವೆ ಎಂದು ಹೇಳಿದ್ದಾರೆ.

ಭಗೀರಥ ಪೀಠಕ್ಕೆ ಜಮೀನು ಮಂಜೂರಾತಿ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. ಉಪ್ಪಾರ ಸಮಾಜಕ್ಕೆ ಮೀಸಲಾತಿ ಬಗ್ಗೆ ಕೇಂದ್ರಕ್ಕೆ ಶಿಫಾರಸು ಭರವಸೆ ನೀಡಿದ್ದಾರೆ. ಇನ್ನು ಎಸ್ಟಿ ಮೀಸಲಾತಿಗೆ ಉಪ್ಪಾರ ಸಮಾಜ ಮನವಿ ಮಾಡಿದೆ. ಕುರಿ ಕಾಯುವವನ ಮಗ ಸಿಎಂ ಆಗಿದ್ದನ್ನು ಕೆಲವರು ಸಹಿಸಲ್ಲ. ನಿಮ್ಮ ಆಶೀರ್ವಾದ ನನ್ನ ಮೇಲೆ ಸರ್ಕಾರದ ಮೇಲೆ ಇರಲಿ ಎಂದಿದ್ದಾರೆ.

ನನ್ನ ತಂದೆ ಪ್ರತಿಯೊಂದಕ್ಕೂ ಶಾನುಭೋಗರ ಬಳಿ ಕೇಳುತ್ತಿದ್ದರು. ಕಾನೂನು ಪದವಿ ಅಭ್ಯಾಸಕ್ಕೆಂದು ಕೇಳಿದಾಗ ಬೇಡ ಅಂದಿದ್ದರು. ನಾನು ಊರ ಪಂಚಾಯಿತಿ ಸೇರಿಸಿ ಕಾನೂನು ಪದವಿ ಓದಿದೆ. ಕಾನೂನು ಪದವಿ ಓದಿದ್ದಕ್ಕೆ ನಾನು ಈಗ ಮುಖ್ಯಮಂತ್ರಿ ಆಗಿದ್ದೇನೆ. ಅವಕಾಶ ಸಿಕ್ಕರೆ ಎಲ್ಲವೂ ಸಾಧ್ಯ ಎಂದರು.

ಜಗದ್ಗುರು ಶ್ರೀ ಡಾ: ಪುರುಷೋತ್ತಮಾನಂದ ಪುರಿ ಮಹಾಸ್ವಾಮಿ, ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವರು ಹಾಗೂ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಸಂಸ್ಥೆಯ ಅಧ್ಯಕ್ಷ ಪುಟ್ಟರಂಗಶೆಟ್ಟಿ, ಸಚಿವರಾ ಕೆ.ಹೆಚ್. ಮುನಿಯಪ್ಪ , ಸತೀಶ್ ಜಾರಕೀಹೊಳಿ, ಉಸ್ತುವಾರಿ ಸಚಿವ ಡಾ: ಕೆ. ಸುಧಾಕರ್ , ಶಾಸಕರಾದ ಗೋವಿಂದಪ್ಪ, ಶ್ರೀನಿವಾಸ್, ಪುಟ್ಟಸ್ವಾಮಿ ಗೌಡ, ಮಾಜಿ ಸಂಸದ ಚಂದ್ರಪ್ಪ, ಉಪ್ಪಾರ ಸಮಾಜದ ಮುಖಂಡರು, ಸಾಲುಮರದ ತಿಮ್ಮಕ್ಕ ಉಪಸ್ಥಿತರಿದ್ದರು.

## ದೇವರ ಹುಂಡಿಗೆ ಕನ್ನ ಹಾಕಿ
### 4 ಲಕ್ಷ ರೂ ಕದ್ದ ಖದೀಮರು



ಮೈಸೂರು: ಹೊಸಲು ಮಾರಮ್ಮ ದೇವಸ್ಥಾನದ ಬೀಗ ಒಡೆದು ಸುಮಾರು 3–4 ಲಕ್ಷ ರೂಪಾಯಿಗಳನ್ನು ಕಳ್ಳತನ ಮಾಡಿರುವ ಘಟನೆ ಹುಣಸೂರು ತಾಲೂಕಿನ ಹೊಸರಾಮನಹಳ್ಳಿಯಲ್ಲಿ ನಡೆದಿದೆ. ಹುಂಡಿಯಲ್ಲಿದ್ದ ಚಿಲ್ಲರೇ ಹಣ ಎಸೆದು ನೋಟುಗಳನ್ನು ಮಾತ್ರ ಕಳ್ಳರು ತೆಗೆದುಕೊಂಡು ಹೋಗಿದ್ದಾರೆ. ಇನ್ನು ಕಳ್ಳರ ಕೈಚಳಕ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ರಾತ್ರಿ ವೇಳೆ ದೇವಾಲಯಕ್ಕೆ ನುಗ್ಗಿರುವ ಮುಸುಕು ಧ–ರಿಸಿದ ಮೂವರು ಖದೀಮರು ಒಳಗಿದ್ದ 3 ಹುಂಡಿಗಳನ್ನು ಕದ್ದೊಯ್ದಿದ್ದಾರೆ. ಬಳಿಕ ದೇವಸ್ಥಾನದ ಪಕ್ಕದ ಜಮೀನಿನಲ್ಲಿ ಹುಂಡಿಯನ್ನು ತೆಗೆದು ಅದರಲ್ಲಿನ ನೋಟುಗಳನ್ನು ಮಾತ್ರ ತೆಗೆದುಕೊಂಡು, ಚಿಲ್ಲರೆ ಹಣ ಅಲ್ಲೇ ಬಿಸಾಡಿ ಖದೀಮರು ಪರಾರಿಯಾಗಿದ್ದಾರೆ. ದೇವಾಲಯದ ಮೂರು ಹುಂಡಿಗಳಲ್ಲಿ ಸುಮಾರು 3 ರಿಂದ 4 ಲಕ್ಷ ರೂಪಾಯಿಗಳು ಭಕ್ತರು ಹಾಕಿದ ಕಾಣಿಕೆ ಇರಬಹುದು ಎಂದು ಅಂದಾಜಿಸಲಾಗಿದೆ. ಬೆಳಗ್ಗೆ ಗುಡಿಯ ಅರ್ಚಕ ಉಮೇಶ್‌ಗೆ ಸ್ಥಳೀಯರು ಮಾಹಿತಿ ನೀಡಿದ್ದು ತಕ್ಷಣ ದೇವಾಲಯಕ್ಕೆ ಬಂದು ವೀಕ್ಷಿಸಿದ್ದಾರೆ. ಇನ್ನು ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಶ್ವಾನದಳ, ಬೆರಳಚ್ಚು ತಜ್ಞರು ಎಲ್ಲವನ್ನು ಪರೀಕ್ಷೆ ಮಾಡಿದ್ದಾರೆ. ಈ ಸಂಬಂಧ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

## ಕೇಂದ್ರ ಸಚಿವೆ ಹೆಸರು ಹೇಳಿ
### ಕಂತೆ ಕಂತೆ ಹಣ ಲೋಟಿ



ಆನೇಕಲ್: ಲೋನ್ ಕೊಡೋದಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹೆಸರಲ್ಲಿ ವಂಚನೆ ಮಾಡಿರುವ ಘಟನೆ ಆನೇಕಲ್ ತಾಲೂಕಿನ ನಡೆದಿದೆ.

ಹೊಸೂರು ಮೂಲದ ಪವಿತ್ರಾ ಎಂಬಾಕೆಯಿಂದ ವಂಚನೆ ಮಾಡಿರುವುದು ಬೆಳಕಿಗೆ ಬಂದಿದೆ. ಬ್ಲೂ ವಿಂಗ್ಸ್ ಎಂಬ ಹೆಸರಿನ ಟ್ರಸ್ಟ್ ಮಾಡಿಕೊಂಡು 14 ಮಂದಿ ವಂಚಕರು ಕೋಟಿ ಕೋಟಿ ಲೂಟಿ ಮಾಡಿದ್ದಾರೆ. ಟ್ರಸ್ಟ್ಗೆ RBI ನಿಂದ 17 ಕೋಟಿ ಬಂದಿರೋದಾಗಿ ಹೇಳಿ ಗ್ರಾಹಕರಿಗೆ ಮೋಸ ಮಾಡಿದ್ದಾರೆ. ಒಬ್ಬರಿಗೆ 10 ಲಕ್ಷ ಲೋನ್ ನೀಡಿದರೆ ಅದರಲ್ಲಿ 5 ಲಕ್ಷ ರೂಪಾಯಿ ಸಬ್ಸಿಡಿ ಎಂದು ಹೇಳಿ ಜನರನ್ನು ನಂಬಿಸಿದ್ದ ವಂಚಕಿ, ಚಂದಾಪುರ, ಅತ್ತಿಬೆಲೆ, ಹೊಸೂರು, ಧರ್ಮಪುರಿ ಸೇರಿದಂತೆ ಹಲವು ಕಡೆಗಳಲ್ಲಿ ವಂಚನೆ ಮಾಡಿದ್ದು, ಆರೋಪಿಗಳ ವಿರುದ್ಧ ಪ್ರಕರಣ ದಾಖಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಕೇಂದ್ರ ಸಚಿವೆ ನಿರ್ಮಾಲಾ ಸೀತಾರಾಮನ್ ಹೆಸರು ಹಾಗೂ ಆರ್‌ಬಿಐ ಹೆಸರು ಹೇಳಿಕೊಂಡು ತಮಿಳುನಾಡಿನ ಹೊಸೂರು ಮೂಲದ ಪವಿತ್ರಾ ಎಂಬ ಮಹಿಳೆ ಬ್ಲೂ ವಿಂಗ್ಸ್ ಎಂಬ ಹೆಸರಿನ ಟ್ರಸ್ಟ್ ಹೆಸರಿನಲ್ಲಿ ವಂಚನೆ ಮಾಡಿರುವ ಆರೋಪ ಕೇಳಿ ಬಂದಿದೆ. ಜನರನ್ನು ನಂಬಿಸಲು ಕೇಂದ್ರ ಸಚಿವೆ ನಿರ್ಮಾಲಾ ಸೀತಾರಾಮನ್ ಸಹಿ ಇರುವ ನಕಲಿ ಕಾಪಿ ತೋ–ರಿಸಿದ್ದು, ನೂರಾರು ಮಂದಿ ಅಮಾಯಕ ಜನರಿಗೆ ಟೋಪಿ ಹಾಕುವ ಕೆಲಸ ಮಾಡಿದ್ದಾರಂತೆ. ಅಲ್ಲದೇ, ಕಂತೆ ಕಂತೆ ಹಣದ ನೋಟುಗಳ ವಿಡಿಯೋಗಳನ್ನ ಕಳುಹಿಸಿ ಜನರಿಗೆ ನಂಬಿಸಿದ್ದು, ಇದನ್ನು ನಂಬಿದ ಜನರು ಒಂದು ಗುಂಪು ಮಾಡಿಕೊಂಡು ಈಕೆಗೆ ಹಣ ನೀಡುತ್ತಾ ಬಂದಿದ್ದರಂತೆ. ಆದರೆ ತಿಂಗಳುಗಳು ಕಳೆದರೂ ಲೋನ್ ಬಾರದೆ ಇದ್ದಾಗ ವಂಚಕಿ ಪವಿತ್ರಾಳ ಕಳ್ಳಾಟ ಬಯಲಾಗಿದ್ದು, ಸಾಲದ ಸುಳಿಗೆ ಸಿಲುಕಿದ ಅಮಾಯಕ ಜನರು ಬೀದಿಪಾಲಾಗಿದ್ದಾರೆ. ಘಟನೆ ಸಂಬಂಧ ಸೂರ್ಯನಗರ, ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ವಂಚನೆ ಪ್ರಕರಣ ದಾಖಲು ಮಾಡಲಾಗಿದೆ. ಪವಿತ್ರಾ ಸೇರಿದಂತೆ ಆಕೆಯೊಂದಿಗೆ ಇದ್ದ ಪ್ರವೀಣ್, ಯಲ್ಲಪ್ಪ, ಶೀಲ, ರುಕ್ಮಿಣಿ, ರಾಧ, ಮಮತಾ, ನೆಹರೂಜಿ, ಶರತ್ ಕುಮಾರ್, ಸತೀಶ್, ಮಂಜುಳಾ, ಹಾಲ್ಬರ್ಟ್ ಮಾರ್ಟಿನ್, ಹೇಮಲತಾ, ಶಾಲಿನಿ ಎಂಬವರ ವಿರುದ್ಧವೂ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ರಾಮಮಂದಿರಕ್ಕೂ ಮೊದಲು ವಾಲ್ಮೀಕಿ ಮಂದಿರ ಕಟ್ಟಬೇಕಿತ್ತು: ಸಚಿವ ಕೆ.ಎನ್. ರಾಜಣ್ಣ



ದಾವಣಗೆರೆ: ಶ್ರೀರಾಮನ ಬಗ್ಗೆ ಜಗತ್ತಿಗೆ ತಿಳಿಸಿದ್ದೇ ವಾಲ್ಮೀಕಿ. ಹೀಗಾಗಿ ರಾಮಮಂದಿರಕ್ಕೂ ಮೊದಲು ವಾಲ್ಮೀಕಿ ಮಂದಿರ ಕಟ್ಟಬೇಕಿತ್ತು ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಾರೆ.

ಹರಿಹರ ತಾಲೂಕಿನ ರಾಜನಹಳ್ಳಿಯಲ್ಲಿ ನಡೆದ ವಾಲ್ಮೀಕಿ ಜಾತ್ರೆಯಲ್ಲಿ ಮಾತನಾಡಿ ಅವರು, ವಾಲ್ಮೀಕಿ ಸಮುದಾಯದ ಮೂವ–ರಿಗೆ ಸಚಿವ ಸ್ಥಾನ ನೀಡಿದ್ದಾರೆ. ರಾಜ್ಯದಲ್ಲಿ 100 ದೇವಸ್ಥಾನಗಳ ಜೀರ್ಣೋದ್ಧಾರ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ, ಶ್ರೀರಾಮನ ಹೆಸರಿನಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ನಾವು ಕೂಡ ರಾಮ ಭಕ್ತರೇ. ಆದರೆ ರಹೀಮನನ್ನೂ ಅಷ್ಟೇ ಪ್ರೀತಿಯಿಂದ ನೋಡುತ್ತೇವೆ. ರಾಮನ ಹೆಸರಲ್ಲಿ ರಾಜ–ಕೀಯ ಮಾಡುವುದನ್ನ ಬಿಡಬೇಕು ವಾಗ್ದಾಳಿ ಮಾಡಿದ್ದಾರೆ.


ಗೃಹ ಇಲಾಖೆ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ರಾಜ್ಯದಲ್ಲಿ ವಾಲ್ಮೀಕಿ ವಿವಿ ಆಗಲೇಬೇಕು. ವಾಲ್ಮೀಕಿ ವಿವಿ ಸ್ಥಾಪನೆಗೆ ಈ ಬಾರಿ ಬಜೆಟ್ನಲ್ಲಿ ಘೋಷಿಸಬೇಕು. ಸಿಎಂ ಸಿದ್ದರಾಮಯ್ಯ ಬಿಟ್ಟರೆ ಬೇರೆ ಯಾರೂ ಇದನ್ನು ಮಾಡಲ್ಲ. ರಾಮನಿಗೆ ಸಂಬಂಧವೇ ಇಲ್ಲದವರು ಏನೇನೋ ಮಾಡುತ್ತಿದ್ದಾರೆ. ನಮಗೆ ಸಂಬಂಧ ಇದೆ, ಹೀಗಾಗಿ ವಾಲ್ಮೀಕಿ ವಿವಿ ಸ್ಥಾಪನೆ ಆಗಬೇಕು ಎಂದು ಹೇಳಿದ್ದಾರೆ.

ಸಮಾನತೆ ಪ್ರತಿಪಾದನೆ ಮಾಡಿದರೂ ಜಾತಿ ವ್ಯವಸ್ಥೆ ಜೀವಂತ ಇದೆ. ಆಂಧ್ರ, ಪಂಜಾಬ್ನಲ್ಲಿ ವಾಲ್ಮೀಕಿ ಸಮಾಜ ಹೆಚ್ಚಿನ ಸಂಖ್ಯೆಯಲ್ಲಿದೆ. ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿ ಹೆಚ್ಚಳ ಮಾಡುವ ವಿಚಾರದಲ್ಲಿ ಆಗಿನ ಸಿಎಂ ಹೆಚ್ಡಿ ಕುಮಾರಸ್ವಾಮಿ ನಿರೀಕ್ಷಿತ ಪ್ರಮಾಣದಲ್ಲಿ ಸ್ಪಂದಿಸಲಿಲ್ಲ ಎಂದಿದ್ದಾರೆ.

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಸ್ವಾಮೀಜಿ ಮಾತನಾಡಿ, ರಾಜ್ಯದ ಯಾವುದಾದರೂ ವಿವಿಗೆ ಮಹರ್ಷಿ ವಾಲ್ಮೀಕಿ ಹೆಸರಿಡಬೇಕು. ಅದಕ್ಕಿಂತ ಮುಖ್ಯವಾಗಿ **SC, ST** ಬ್ಯಾಕ್ಲಾಗ್ ಹುದ್ದೆ ಭರ್ತಿ ಮಾಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ. ವಾಲ್ಮೀಕಿ ಸ್ವಾಮೀಜಿ ನಿರಂತರ ಹೋರಾಟದಿಂದ ಮೀಸಲಾತಿ ಹೆಚ್ಚಿಸಿದರು. ಬೆಂಗಳೂರಿನಲ್ಲಿ ಹೋರಾಟದಿಂದ ಮೀಸಲಾತಿ ಪ್ರಮಾಣ ಹೆಚ್ಚಿಸಿದ್ದರು ಎಂದರು.

ದೇಶದಾದ್ಯಂತ ಪರಿಶಿಷ್ಟ ಜಾತಿ, ಪರಿಶಿಷ್ಠ ವರ್ಗದವರು ಇದ್ದಾರೆ. ಕರ್ನಾಟಕದಲ್ಲಿ ಖಅ, ಖಖ ಮೀಸಲಾತಿ ಪ್ರಮಾಣ 24%ಗೆ ಹೆಚ್ಚಿಸಲಾಗಿದೆ. ಇದೇ ಮಾದರಿಯಲ್ಲಿ ಬೇರೆ ರಾಜ್ಯಗಲ್ಲಿ ಮೀಸಲಾತಿ ಪ್ರಮಾಣ ಹೆಚ್ಚಿಸಿ. ಕೇಂದ್ರ ಸರ್ಕಾರವೂ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು. ಮುಂದಿನ ವರ್ಷ ಪರಿವಾರ, ತಳವಾರರನ್ನು ಎಸ್ಟಿಗೆ ಸೇರಿಸುವಂತೆ ಆಗ್ರಹಿಸಿದ್ದಾರೆ.

## ಸವದತ್ತಿ ಯಲ್ಲಮ್ಮ–ಹುಲಿಗೆಮ್ಮ ದೇವಸ್ಥಾನಕ್ಕೆ ಅಭಿವೃದ್ಧಿ ಪ್ರಾಧಿಕಾರ ರಚನೆ: ಸಚಿವ ರಾಮಲಿಂಗ ರೆಡ್ಡಿ



ಕಲಬುರಗಿ: ರಾಜ್ಯದ ಪ್ರಮುಖ ಧಾರ್ಮಿಕ ತಾಣಗಳಾದ ಸವದತ್ತಿ ಯಲ್ಲಮ್ಮ ದೇವಸ್ಥಾನ ಮತ್ತು ಹುಲಿಗಿ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗುವುದು ಎಂದು ಮುಜರಾಯಿ ಖಾತೆ ಸಚಿವ ರಾಮಲಿಂಗ ರೆಡ್ಡಿ ತಿಳಿಸಿದರು.

ಕಲಬುರಗಿಯಲ್ಲಿಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಸವದತ್ತಿ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗುವುದು. 87 ಎಕರೆ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗುವುದು. ಇದಕ್ಕೆ ಯಾವುದೇ ಹಣದ ಕೊರತೆ ಇಲ್ಲ. ಪ್ರವಾಸೋದ್ಯಮ ಇಲಾಖೆಯು 87 ಹೊರತುಪಡಿಸಿ ಒಂದಷ್ಟು ಜಾಗ ಪಡೆದು ಅಭಿವೃದ್ಧಿಪಡಿಸಲಿದೆ ಎಂದರು.

ಕೊಪ್ಪಳ ಜಿಲ್ಲೆಯ ಹುಲಿಗಿಯ ಹುಲಿಗೆಮ್ಮ ದೇವಸ್ಥಾನವನ್ನು ಸಹ ಅಭಿವೃದ್ಧಿಪಡಿಸಲಾಗುವುದು. ಆ ದೇವಸ್ಥಾನಕ್ಕೂ ಸಹಾ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

## ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರದಿಂದ
### ಉಚಿತ 'ಸ್ಮಾರ್ಟ್ ಫೋನ್' ಭಾಗ್ಯ

ಬೆಂಗಳೂರು: ಅಂಗನವಾಡಿ ಕಾರ್ಯಕರ್ತೆಯರಿಗೆ ಗುಡ್ ನ್ಯೂಸ್ ಸಿಕ್ಕಿದ್ದು, ರಾಜ್ಯ ಸರ್ಕಾರ 75,938 ಮೊಬೈಲ್ ಫೋನ್ ಖರೀದಿಗೆ ಒಪ್ಪಿಗೆ ನೀಡಿದೆ. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರಿಗೆ ಪೂರೈಸಲು 89.61 ಕೋಟಿ ವೆಚ್ಚದಲ್ಲಿ ಒಟ್ಟು 75,938 ಮೊಬೈಲ್ ಫೋನ್ಗಳ ಖರೀದಿಗೆ ಸಂಪುಟ ಸಭೆ ಒಪ್ಪಿಗೆ ನೀಡಿದೆ. ತಲಾ 11,800 ಮೌಲ್ಯದ ಮೊಬೈಲ್ ಅನ್ನು ಟೆಂಡರ್ ಮೂಲಕ ಖರೀದಿಸಲಾಗುತ್ತದೆ. ಪೋಷಣ್ ಅಭಿಯಾನದಡಿ ಮಾಹಿತಿ ಸಂಗ್ರಹ, ದಾಖಲೀಕರಣ ಮತ್ತು ಸಂವಹನಕ್ಕೆ ಇದು ನೆರವಾಗಲಿದೆ ಎಂದು ಸರ್ಕಾರ ಪ್ರಕಟಣೆ ಹೊರಡಿಸಿದೆ.

## ಮಾಜಿ ಪ್ರಧಾನಿ ಪಿವಿ ನರಸಿಂಹ ರಾವ್, ಚರಣ್ ಸಿಂಗ್ ಮತ್ತು ಕೃಷಿ ವಿಜ್ಞಾನಿ ಎಂಎಸ್ ಸ್ವಾಮಿನಾಥನ್ ಗೆ 'ಭಾರತ ರತ್ನ' ಪ್ರಶಸ್ತಿ



ನವದೆಹಲಿ: ಕಳೆದ ವಾರವಷ್ಟೇ ಮಾಜಿ ಉಪ ಪ್ರಧಾನಿ, ಬಿಜೆಪಿ ಹಿರಿಯ ಧುರೀಣ ಎಲ್ ಕೆ ಅಡ್ವಾಣಿಯವರಿಗೆ ದೇಶದ ಅತ್ಯುನ್ನತ ನಾಗರಿಕ ಗೌರವ ಪ್ರಶಸ್ತಿ 'ಭಾರತ ರತ್ನ' ಘೋಷಿಸಿದ್ದ ಕೇಂದ್ರ ಸರ್ಕಾರ ಶುಕ್ರವಾರ ಮೂವ–ರಿಗೆ ಭಾರತ ರತ್ನ ಪ್ರದಾನ ಮಾಡುವುದಾಗಿ ಘೋಷಿಸಿದೆ.


ಈ ಕುರಿತು ಟ್ವೀಟ್ ಮಾಡಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಮಾಜಿ ಪ್ರಧಾನ ಮಂತ್ರಿಗಳಾದ ಪಿ ವಿ ನರಸಿಂಹ ರಾವ್, ಚೌಧರಿ ಚರಣ್ ಸಿಂಗ್ ಹಾಗೂ ದೇಶದ ಹಸಿರು ಕ್ರಾಂತಿಯ ಹರಿಕಾರ ಡಾ ಎಂ ಎಸ್ ಸ್ವಾಮಿನಾಥನ್ ಅವರಿಗೆ ಭಾರತ ರತ್ನ ಗೌರವ ನೀಡುವುದಾಗಿ ಘೋಷಿಸಿದ್ದಾರೆ.

ನರಸಿಂಹ ರಾವ್ ಅವರು ಭಾರತವನ್ನು ನಿರ್ಣಾಯಕ ಪರಿವರ್ತನೆಗಳ ಮೂಲಕ ಮುನ್ನಡೆಸಿ ದೇಶದ ಸಾಂಸ್ಕೃತಿಕ ಮತ್ತು ಬೌದ್ಧಿಕ ಪರಂಪರೆಯನ್ನು ಶ್ರೀಮಂತಗೊಳಿಸಿದರು, ಚರಣ್ ಸಿಂಗ್ ಅವರು ದೇಶಕ್ಕೆ ಅನುಪಮ ಕೊಡುಗೆ ನೀಡಿದ್ದಾರೆ. ನರಸಿಂಹ ರಾವ್ ಅವರ ದೂರದೃಷ್ಟಿಯ ನಾಯಕತ್ವವು ಭಾರತವನ್ನು ಆರ್ಥಿಕವಾಗಿ ಮುನ್ನಡೆಸುವಲ್ಲಿ ಪ್ರಮುಖ ಪಾತ್ರ ವಹಿಸಿತು, ಅದರ ಸಮೃದ್ಧಿ, ಬೆಳವಣಿಗೆಗೆ ಭದ್ರ ಬುನಾದಿ ಹಾಕಿತು ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ದೇಶದ ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರಿಗೆ ಭಾರತ ರತ್ನ ನೀಡಿ ಗೌರವಿಸುತ್ತಿರುವುದು ನಮ್ಮ ಸರ್ಕಾರದ ಸೌಭಾಗ್ಯ. ದೇಶಕ್ಕೆ ಅವರು ನೀಡಿದ ಅನುಪಮ ಕೊಡುಗೆಗೆ ಈ ಗೌರವ ಸಮರ್ಪಿಸಲಾಗಿದೆ. ಅವರು ತಮ್ಮ ಇಡೀ ಜೀವನವನ್ನು ರೈತರ ಹಕ್ಕುಗಳು ಮತ್ತು ಅವರ ಕಲ್ಯಾಣಕ್ಕಾಗಿ ಮುಡಿಪಾಗಿಟ್ಟಿದ್ದರು. ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಿ, ದೇಶದ ಗೃಹ ಮಂತ್ರಿಯಾಗಿ ಅವರು ಯಾವಾಗಲೂ ರಾಷ್ಟ್ರ ನಿರ್ಮಾಣಕ್ಕೆ ಉತ್ತೇಜನ ನೀಡಿದರು. ತುರ್ತು ಪರಿಸ್ಥಿತಿಯ ವಿರುದ್ಧವೂ ಅವರು ದೃಢವಾಗಿ ನಿಂತಿದ್ದರು. ನಮ್ಮ ರೈತ ಸಹೋದರ ಸಹೋದರಿಯರಿಗೆ ಅವರ ಸಮರ್ಪಣೆ ಮತ್ತು ತುರ್ತು ಪರಿಸ್ಥಿತಿಯಲ್ಲಿ ಪ್ರಜಾಪ್ರಭುತ್ವಕ್ಕೆ ಅವರ ಬದ್ಧತೆ ಇಡೀ ರಾಷ್ಟ್ರಕ್ಕೆ ಸ್ಫೂರ್ತಿದಾಯಕವಾಗಿದೆ ಎಂದು ಪ್ರಧಾನಿ ಬರೆದುಕೊಂಡಿದ್ದಾರೆ.

ಭಾರತ ಸರ್ಕಾರವು ಡಾ. ಎಂ.ಎಸ್. ಸ್ವಾಮಿನಾಥನ್ ಅವರಿಗೆ ಕೃಷಿ ಮತ್ತು ರೈತರ ಕಲ್ಯಾಣದಲ್ಲಿ ನಮ್ಮ ದೇಶಕ್ಕೆ ನೀಡಿದ ಸ್ಮಾರಕ ಕೊಡುಗೆಗಳನ್ನು ಗುರುತಿಸಿ ಭಾರತ ರತ್ನ ನೀಡುತ್ತಿರುವುದು ಅಪಾರ ಸಂತೋಷದ ವಿಷಯವಾಗಿದೆ. ಸವಾಲಿನ ಸಮಯದಲ್ಲಿ ಭಾರತವು ಕೃಷಿಯಲ್ಲಿ ಸ್ವಾವಲಂಬನೆಯನ್ನು ಸಾಧಿಸಲು ಸಹಾಯ ಮಾಡುವಲ್ಲಿ ಅವರು ಪ್ರಮುಖ ಪಾತ್ರವನ್ನು ವಹಿಸಿದರು. ಭಾರತೀಯ ಕೃಷಿಯನ್ನು ಆಧುನೀಕರಿಸುವಲ್ಲಿ ಮಹೋನ್ನತ ಪ್ರಯತ್ನಗಳನ್ನು ಮಾಡಿದರು. ನಾವೀನ್ಯತೆ ಮತ್ತು ಮಾರ್ಗದರ್ಶಕರಾಗಿ ಅವರ ಅಮೂಲ್ಯವಾದ ಕೆಲಸವನ್ನು ನಾವು ಗುರುತಿಸುತ್ತೇವೆ. ವಿದ್ಯಾರ್ಥಿಗಳಲ್ಲಿ ಕಲಿಕೆ ಮತ್ತು ಸಂಶೋಧನೆಯನ್ನು ಪ್ರೋತ್ಸಾಹಿಸುತ್ತೇವೆ. ಡಾ. ಸ್ವಾಮಿನಾಥನ್ ಅವರ ದಾರ್ಶನಿಕ ನಾಯಕತ್ವವು ಭಾರತೀಯ ಕೃಷಿಯನ್ನು ಪರಿವರ್ತಿಸಿದ್ದು ಮಾತ್ರವಲ್ಲದೆ ರಾಷ್ಟ್ರದ ಆಹಾರ ಭದ್ರತೆ ಮತ್ತು ಸಮೃದ್ಧಿಯನ್ನು ಖಾತ್ರಿಪಡಿಸಿದೆ ಎಂದು ಹೊಗಳಿದ್ದಾರೆ.

## ಕೆಂಪಣ್ಣ ಭ್ರಷ್ಟಾಚಾರ ಆರೋಪಕ್ಕೆ ಕಾಂಗ್ರೆಸ್ ನಾಯಕರ ತಿರುಗೇಟು



ಬೆಂಗಳೂರು: ಕರ್ನಾಟಕ ಕಾಂಗ್ರೆಸ್ ಸರ್ಕಾರದಲ್ಲಿಯೂ ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಗುತ್ತಿಗೆದಾರರ ಸಂಘದ ಅಧ್ಯಕ್ಷ ಡಿ. ಕೆಂಪಣ್ಣ ಆರೋಪಕ್ಕೆ ಕಾಂಗ್ರೆಸ್ ನಾಯಕರು ತೀಕ್ಷ್ಣ ತಿರುಗೇಟು ನೀಡಿದ್ದಾರೆ.

ಕಲಬುರಗಿಯಲ್ಲಿ ಪ್ರತಿಕ್ರಿಯೆ ನೀಡಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ನಮ್ಮ ಸರ್ಕಾರದಲ್ಲಿ ಯಾವುದೇ ಭ್ರಷ್ಟಾಚಾರ ಆಗಿಲ್ಲ ಬಿಜೆಯವರಿಗೆ ನಮ್ಮ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ಇದ್ದ ಸರ್ಕಾರ ಅತ್ಯಂತ ಭ್ರಷ್ಟ ಸರ್ಕಾರವಾಗಿತ್ತು. ನನ್ನ ಜೀವನದಲ್ಲೇ ಅಂತಹ ಸರ್ಕಾರ ನೋಡಿರಲಿಲ್ಲ ಎಂದರು.

ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರ ಇದ್ದಾಗ ಅತಿಹೆಚ್ಚು ಭ್ರಷ್ಟಾಚಾರ ನಡೆದಿತ್ತು. 3 ವರ್ಷಗಳಲ್ಲಿ 3 ಲಕ್ಷ ಕೋಟಿ ಸಾಲ ಮಾಡಿದ್ದರು. ಬಿಜೆಪಿಯವರು ಸಾಲದ ಗ್ಯಾರಂಟಿಯನ್ನು ಕೊಟ್ಟಿದ್ದರು ಎಂದು ರಾಮಲಿಂಗಾರೆಡ್ಡಿ ಟೀಕಿಸಿದರು.

ಕೆಂಪಣ್ಣ ದಾಖಲೆ ನೀಡಲಿ: ಕಾಂಗ್ರೆಸ್ನಲ್ಲಿಯೂ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಕೆಂಪಣ್ಣ ಆರೋಪ ಮಾಡಿದ್ದಾರೆ. ಹಾಗೇನಾದರೂ ಇದ್ದರೆ ದಾಖಲೆ ನೀಡಲಿ. ಈಗಾಗಲೇ ನಾವು ಆಯೋಗ ರಚನೆ ಮಾಡಿದ್ದೇವೆ. ದಯವಿಟ್ಟು ಕೆಂಪಣ್ಣ ಅವರ ಹತ್ತಿರ ದಾಖಲೆ ಇದ್ದರೆ ಆಯೋಗಕ್ಕೆ ನೀಡಲಿ ಎಂದು ಕಲಬುರಗಿಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ನಾವು ಪಾರರ್ಶಕ ಆಡಳಿತ ಮಾಡುತ್ತಿದ್ದೇವೆ. ಸಣ್ಣ ತಪ್ಪು ಆಗಿದ್ದರೂ ದಾಖಲೆ ನೀಡಲಿ. ಜನ ಮತ್ತೊಮ್ಮೆ ವಿಧಾನಸೌಧಕ್ಕೆ ಬಡುತ್ತಿದ್ದಾರೆ. ಬಿಜೆಪಿ ಸರ್ಕಾರ ಇದ್ದಾಗ ವಿಧಾನಸೌಧವನ್ನು ವ್ಯಾಪಾರ ಸೌಧ ಮಾಡಿದ್ದರು ಎಂದು ಅವರು ಟೀಕಿಸಿದ್ದಾರೆ.

ತೆರಿಗೆ ವಿಚಾರದಲ್ಲಿ ಬಿಜೆಪಿಯವರು ಕನ್ನಡಿಗರ ಪರ ಮಾತನಾಡುತ್ತಿಲ್ಲ. ಪ್ರಧಾನಿ ಮೋದಿ ಅವರನ್ನು ಮೆಚ್ಚಿಸಲು ಹೋಗುತ್ತಿದ್ದಾರೆ. ಪ್ರಧಾನಿ ಮೋದಿಯವರು ಹಿಂದೆ ಸಿಎಂ ಆಗಿದ್ದಾಗ ಏನೇನು ಮಾತನಾಡಿದ್ದರು? ದಯವಿಟ್ಟು ಬಿಜೆಪಿಯವರು ತಿಳಿದುಕೊಳ್ಳಲಿ. ಅವಾಗ ಮೋದಿಯವರು ನಮಗೂ ಟ್ಯಾಕ್ಸ್ ಕೇಳಬೇಡಿ, ನಿಮ್ಮನ್ನ ನಾವು ಕೇಳಲ್ಲ ಎಂದಿದ್ದರು. ಅದು ದೇಶ ವಿಭಜನೆ ಹೇಳಿಕೆ ಆಗುವುದಿಲ್ಲವಾ? ನಾವು ಗ್ಯಾರೆಂಟಿ ನೀಡಿದ್ದು ಜನರಿಗೆ ನೇರವಾಗಿ ಹೋಗುತ್ತಿದೆ. ಆರ್ಥಿಕ ದಿವಾಳಿ ಇದ್ದರೆ ಜನರಿಗೆ ಗ್ಯಾರೆಂಟಿ ಕೊಡೋಕೆ ಹೇಗೆ ಸಾಧ್ಯವಾಗ್ತಿತ್ತು ಎಂದು ಅವರು ಪ್ರಶ್ನಿಸಿದ್ದಾರೆ.

ಏನು ಹೇಳಿದ್ದರು ಕೆಂಪಣ್ಣ?: ಈಗಿನ ಕಾಂಗ್ರೆಸ್ ಸರ್ಕಾರದಲ್ಲಿಯೂ 40 ಪರ್ಸೆಂಟ್ ಕಮಿಷನ್ ಇದೆ ಎಂದು ಸುದ್ದಿವಾಹಿನಿಯೊಂದಕ್ಕೆ ನೀಡಿದ ಹೇಳಿಕೆಯಲ್ಲಿ ಕೆಂಪಣ್ಣ ಹೇಳಿದ್ದರು. ಈ ಹಿಂದೆ ಶಾಸಕರು, ಸಚಿವರು ಕಮಿಷನ್ ಕೇಳುತ್ತಿದ್ದರೆ ಈಗ ಅಧಿಕಾರಿಗಳ ಸರದಿ. ನಾವು ಶಾಸಕರು, ಸಚಿವರಿಗೆ ಕೊಡಬೇಕಾಗುತ್ತದೆ ಕಮಿಷನ್ ನೀಡಿ ಎಂದು ಅವರೇ ಕೇಳುತ್ತಾರೆ ಎಂದು ಕೆಂಪಣ್ಣ ಆರೋಪಿಸಿದ್ದರು.

ಪ್ಯಾಕೇಜ್ ಟೆಂಡರ್ ಕರೆಯಬೇಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಸೂಚಿಸಿದ್ದಾರೆ. ಬಿಬಿಎಂಪಿ ಆಯುಕ್ತರ ಮಾತಿಗೂ ಬೆಲೆ ಇರುವುದಿಲ್ಲ. ಎಂಜಿನಿಯರ್ಗಳೆಲ್ಲ ಟೆಂಡರ್ ಕರೆಯುತ್ತಿದ್ದಾರೆ ಎಂದು ಕೆಂಪಣ್ಣ ಆರೋಪಿಸಿದ್ದರು.

## ಜೈಲಿನಲ್ಲಿ ಗರ್ಭಿಣಿಯರಾಗುತ್ತಿರುವ ಮಹಿಳಾ ಕೈದಿಗಳು



ಕೊಲ್ಕತ್ತಾ: ಪಶ್ಚಿಮ ಬಂಗಾಳದಲ್ಲಿ ಸೆರೆವಾಸ ಅನುಭವಿಸುತ್ತಿರುವ ಮಹಿಳಾ ಕೈದಿಗಳು ಗರ್ಭಿಣಿಯರಾಗುತ್ತಿದ್ದು ರಾಜ್ಯದ ವಿವಿಧ ಜೈಲುಗಳಲ್ಲಿ ಸುಮಾರು 196 ಶಿಶುಗಳು ಜನಿಸಿವೆ ಎಂದು ಕೋಲ್ಕತ್ತಾ ಹೈಕೋರ್ಟ್‌ಗೆ ಗುರುವಾರ ಮಾಹಿತಿ ನೀಡಲಾಗಿದೆ.

ಪಶ್ಚಿಮ ಬಂಗಾಳ ರಾಜ್ಯದಲ್ಲಿ ಜೈಲು ಸುಧಾರಣೆಗಳು ಮತ್ತು ಸುಧಾರಣಾ ಗೃಹಗಳಿಗೆ ಸಂಬಂಧಿಸಿದ ಪ್ರಕರಣವನ್ನು ಉಲ್ಲೇಖಿಸುವಾಗ ಅಮಿಕಸ್ ಕ್ಯೂರಿ ಈ ಹೇಳಿಕೆ ನೀಡಿದ್ದಾರೆ.

ಈ ಮಾಹಿತಿಯನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯ ನ್ಯಾಯಮೂರ್ತಿ ಟಿ.ಎಸ್.ಶಿವಜ್ಞಾನಂ ಮತ್ತು ನ್ಯಾಯಮೂರ್ತಿ ಸುಪ್ರತಿಮ್ ಭಟ್ಟಾಚಾರ್ಯ ಅವರಿದ್ದ ವಿಭಾಗೀಯ ಪೀಠ ಮುಂದಿನ ಸೋಮವಾರ ಕ್ರಿಮಿನಲ್ ಪ್ರಕರಣಗಳ ವಿಚಾರಣೆ ನಡೆಸುತ್ತಿರುವ ವಿಭಾಗೀಯ ಪೀಠದೆದುರು ಪ್ರಕರಣ ಪ್ರಸ್ತಾಪಿಸುವಂತೆ ಸೂಚಿಸಿದೆ.

ಈ ಕಳವಳ ದೂರವಾಗ ಬೇಕೆಂದರೆ ಸುಧಾರಣಾ ಗೃಹಗಳ ಪುರುಷ ಉದ್ಯೋಗಿಗಳು ಮಹಿಳಾ ಕೈದಿಗಳಿರುವ ಆವರಣ ಪ್ರವೇಶಿಸುವುದನ್ನು ನಿಷೇಧಿಸಬೇಕು ಎಂದು ಅಮಿಕಸ್ ಸಲಹೆ ನೀಡಿದರು. ಅಲ್ಲದೆ ಅವರು ನೀಡಿರುವ ವಿವಿಧ ಸಲಹೆಗಳನ್ನು ನ್ಯಾಯಾಲಯ ದಾಖಲಿಸಿಕೊಂಡಿದೆ.

"ಈ ಎಲ್ಲಾ ವಿಷಯಗಳ ಬಗ್ಗೆ ಪರಿಣಾಮಕಾರಿ ತೀರ್ಪು ನೀಡುವ ಸಲುವಾಗಿ, ಪ್ರಕರಣವನ್ನು ಕ್ರಿಮಿನಲ್ ವಿಚಾರಣೆ ನಡೆಸಲಿರುವ ವಿಭಾಗೀಯ ಪೀಠದ ಮುಂದೆ ಇರಿಸುವುದು ಸೂಕ್ತವೆಂದು ನಾವು ಭಾವಿಸುತ್ತೇವೆ" ಎಂದು ನ್ಯಾಯಪೀಠ ತನ್ನ ಆದೇಶದಲ್ಲಿ ತಿಳಿಸಿದೆ. ತಾನು ಸುಧಾರಣಾ ಗೃಹವೊಂದಕ್ಕೆ ಭೇಟಿ ನೀಡಿದ್ದೆ, ಅಲ್ಲಿ ಒಬ್ಬ ಮಹಿಳೆ ಗರ್ಭಿಣಿಯಾಗಿರುವುದನ್ನು ಕಂಡೆ. ಜೈಲಿನಲ್ಲಿ ಜನಿಸಿದ 15 ಮಕ್ಕಳು ಕೂಡ ಈ ಸುಧಾರಣಾ ಗೃಹದಲ್ಲಿದ್ದರು ಎಂದು ಅಮಿಕಸ್ ಅವರು ಈ ಸಂದರ್ಭದಲ್ಲಿ ವಿವರಿಸಿದ್ದಾರೆ.

## ಸುಳ್ಳು ಅಂತಾ ಸಾಬೀತು ಮಾಡಿದ್ರೆ ರಾಜಕೀಯ ಬಿಡ್ತೀನಿ: ಬಿಜೆಪಿಗರಿಗೆ ಸಿಎಂ ಸವಾಲ್



ದಾವಣೆಗೆರೆ: ತೆರಿಗೆ ಹಂಚಿಕೆ ವಿಚಾರದಲ್ಲಿ ನಾನು ಸುಳ್ಳು ಹೇಳಿಲ್ಲ. ಸುಳ್ಳು ಅಂತಾ ಸಾಬೀತು ಮಾಡಿದ್ರೆ ರಾಜಕೀಯ ಬಿಡ್ತೀನಿ ಎಂದು ಬಿಜೆಪಿಗರಿಗೆ ಸಿಎಂ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

ದಾವಣಗೆರೆಯ ರಾಜನಹಳ್ಳಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ತಲೆ ಅಲ್ಲಾಡಿಸುತ್ತಾರೆ ಅಂದ್ರೆ ನಾವು ಅಲ್ಲಾಡಿಸಬೇಕಾ? ಅವರಂತೆ ನಾವೂ ಬಾಯಿ ಮುಚ್ಕೊಂಡಿರಬೇಕಾ ಎಂದು ಪ್ರಶ್ನೆ ಮಾಡಿದರು.

ರಾಜ್ಯದಲ್ಲಿ 100 ರೂಪಾಯಿ ಹಣ ತೆರಿಗೆ ಕೊಟ್ರೆ 12 ರಿಂದ 13 ರೂಪಾಯಿ ಬರುತ್ತದೆ. ಕನ್ನಡಿಗರಾದ ನಿಮಗೆ ಇದಕ್ಕೆ ಒಪ್ಪಿಗೇನಾ ಇದೇನಾ? ಅದಕ್ಕಾಗಿ ದೆಹಲಿಯಲ್ಲಿ ಪ್ರತಿಭಟನೆ ಮಾಡಿದ್ದೇವೆ. ರಾಜ್ಯದಿಂದ 4 ಲಕ್ಷದ 30 ಸಾವಿರ ಕೋಟಿ ಹಣ ಈ ವರ್ಷ ತೆರಿಗೆ ಸಂಗ್ರವಾಗುತ್ತಿದೆ. ನಮಗೆ ಬರುವುದು ಕಡಿಮೆ. ಉಳಿದಿದೆಲ್ಲಾ ಅವರೇ ಇಟ್ಟುಕೊಳ್ಳುತ್ತಾರೆ ಎಂದು ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು.


ನಮ್ಮ ಹಣ ಕೇಳೋದು ತಪ್ಪಾ? ರಾಜ್ಯಗಳ ಪೈಕಿ ತೆರಿಗೆ ಪಾವತಿಸುವುದರಲ್ಲಿ ಕರ್ನಾಟಕ 2ನೇ ಸ್ಥಾನದಲ್ಲಿದೆ. ಆದ್ರೂ ನಮ್ಮ ಹಣ ಕೇಳುವುದು ತಪ್ಪಾ ಎಂದರು. ಇದೇ ವೇಳೆ ಜಾರಕಿಹೊಳಿ, ಮುನಿಯಪ್ಪ ನಡುವೆ ನಡೆದಿದೆ ಎನ್ನಲಾದ ಗುಪ್ತ ಸಭೆಯ ವಿಚಾರಕ್ಕೆ ಪ್ರತಿಕ್ರಿಯಿಸಲು ನಿರಾಕರಿಸಿದರು.

ಮೂರು ವರ್ಷಗಳಿಂದ ಜಿಲ್ಲೆಗೆ ಬಂದಿಲ್ಲವಾ ಸಂಸದರು? ಬಳ್ಳಾರಿ ಸಂಸದ ದೇವೇಂದ್ರಪ್ಪ ಕಚೇರಿಗೆ ಯುವ ಕಾಂಗ್ರೆಸ್ ಕಾರ್ಯಕರ್ತರು ಮುತ್ತಿಗೆ ಹಾಕಲು ಯತ್ನಿಸಿದ್ದಾರೆ. ಕಚೇರಿ ಒಳ ನುಗ್ಗಲು ಯತ್ನಿಸಿದ ಕಾರ್ಯಕರ್ತರನ್ನು ಪೊಲೀಸರು ತಡೆದಿದ್ದಾರೆ. ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರ ಹಾಕಿದ್ದಾರೆ. ಸಂಸದ ದೇವೇಂದ್ರಪ್ಪ 3 ವರ್ಷಗಳಿಂದ ಬಳ್ಳಾರಿಗೆ ಬಂದೇ ಇಲ್ಲ. ಇಂತಹವರಿಂದ ರಾಜ್ಯಕ್ಕೆ, ಜಿಲ್ಲೆಗೆ ಯಾವುದೇ ಉಪಯೋಗವಿಲ್ಲವೆಂದು ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ಹೊರ ಹಾಕಿದ್ದಾರೆ.

ಮತ್ತೆ ಖರ್ಗೆ ವಿರುದ್ಧ ಚಿಂಚನಸೂರ್ ರೆಬೆಲ್? ಮಾಜಿ ಸಚಿವ ಹಾಗೂ ಕೋಲಿ ಸಮಾಜದ ಹಿರಿಯ ಮುಖಂಡ ಬಾಬುರಾವ್ ಚಿಂಚನಸೂರು ಮತ್ತೆ ಕಾಂಗ್ರೆಸ್ ತೊರೆದು ಮಲ್ಲಿಕಾರ್ಜುನ ಖರ್ಗೆ ವಿರುದ್ಧ ರೆಬೆಲ್ ಆಗುವ ಸೂಚನೆ ನೀಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿರೋ ಚಿಂಚನಸೂರು ಅಭಿಮಾನಿಗಳು, ತಮ್ಮ ನಾಯಕರನ್ನ ಕಾಂಗ್ರೆಸ್‌ನಲ್ಲಿ ಕಡೆಗಣಿಸಲಾಗ್ತಿದೆ ಎಂದು ಆರೋಪಿಸಿದ್ದಾರೆ. ಇದೇ ರೀತಿ ಕಡೆಗಣಿಸಿದ್ರೆ ಮುಂದಿನ ದಿನಗಳಲ್ಲಿ ತಕ್ಕಪಾಠ ಕಲಿಸಬೇಕಾಗುತ್ತದೆ ಎಂದು ಪೋಸ್ಟ್ ಹಾಕಿದ್ದಾರೆ.

## ವಂಚನೆ ಪ್ರಕರಣ: ಸೋನಾಕ್ಷಿ ಸಿನ್ಹಾಗೆ ಬಂಧನದ ಭೀತಿ



ಬೆಂಗಳೂರು: ಬಾಲಿವುಡ್ ನಟಿ ಸೋನಾಕ್ಷಿ ಸಿನ್ಹಾಗೆ ಬಂಧನದ ಭೀತಿ ಎದುರಾಗಿದೆ. ವಂಚನೆ ಆರೋಪದಡಿ ಸೋನಾಕ್ಷಿ ವಿರುದ್ಧ ಉತ್ತರಪ್ರದೇಶದ ಮುರಾದಾಬಾದ್ ಕೋರ್ಟ್‌ನಲ್ಲಿ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದಲ್ಲಿ ಸೋನಾಕ್ಷಿ ಸಿನ್ಹಾ ಅವರಿಗೆ ಹಿನ್ನೆಡೆಯಾಗಿದ್ದು, ನ್ಯಾಯಾಲಯ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದೆ. 2018ರಲ್ಲಿ ಬಾಲಿವುಡ್ ನಟಿ ಸೋನಾಕ್ಷಿ ಸಿನ್ಹಾ ಅವರು ಒಂದು ಕಾರ್ಯಕ್ರಮಕ್ಕೆ ಬರಲು ಒಪ್ಪಿಕೊಂಡಿದ್ದರು.

ಅದಕ್ಕಾಗಿ ಕಾರ್ಯಕ್ರಮದ ಆಯೋಜಕ ಪ್ರಮೋದ್ ಶರ್ಮಾ ಎಂಬುವವರಿಂದ ಹಣ ಪಡೆದಿದ್ದಾರೆ. ಹಣ ಪಡೆದುಕೊಂಡು ಕಾರ್ಯಕ್ರಮದಲ್ಲಿ ಭಾಗಿಯಾಗದ ಕಾರಣ ಆಯೋಜಕರಿಗೆ ಭಾರೀ ನಷ್ಟವಾಗಿದೆ.

# ಉಭಯ ಸದನದಲ್ಲಿ ಕಡ್ಡಾಯ ಹಾಜರಾತಿಗೆ ಸಂಸದರಿಗೆ ಬಿಜೆಪಿ ವಿಪ್; ಕುತೂಹಲ ಕೆರಳಿಸಿದ ಕೇಂದ್ರದ ನಡೆ

ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ನಾಳಿನ ಲೋಕಸಭೆ ಮತ್ತು ರಾಜ್ಯಸಭೆ ಕಲಾಪಕ್ಕೆ ಕಡ್ಡಾಯವಾಗಿ ಹಾಜರಾಗುವಂತೆ ಬಿಜೆಪಿ ಸಂಸದರು ಮತ್ತು ರಾಜ್ಯಸಭಾ ಸದಸ್ಯರಿಗೆ ವಿಪ್ ಜಾರಿ ಮಾಡಲಾಗಿದೆ.

ಇಂದಿಗೆ ಅಂತ್ಯವಾಗಬೇಕಿದ್ದ ಬಜೆಟ್ ಅಧಿವೇಶನವನ್ನು ಕೇಂದ್ರ ಸರ್ಕಾರ ಒಂದು ದಿನ ವಿಸ್ತರಣೆ ಮಾಡಿದ್ದು, ಇದೀಗ ಕಲಾಪದ ಅಂತಿಮ ದಿನ ತನ್ನೆಲ್ಲಾ ಸಂಸದರು ಮತ್ತು ರಾಜ್ಯಸಭಾ ಸದಸ್ಯರು ಕಡ್ಡಾಯವಾಗಿ ಕಲಾಪದಲ್ಲಿ ಹಾಜರಿರುವಂತೆ ವಿಪ್ ಜಾರಿಗೊಳಿಸಲಾಗಿದೆ. ಕೇಂದ್ರ ಸರ್ಕಾರದ ಈ ನಡೆ ನಾಳಿನ ಕಲಾಪದಲ್ಲಿ ಮೋದಿ ಸರ್ಕಾರದ ನಡೆಯತ್ತ ಕುತೂಹಲ ಕೆರಳಿಸುವಂತೆ ಮಾಡಿದೆ.



ಬಜೆಟ್ ಅಧಿವೇಶನದ ಕೊನೆಯ ದಿನ ಅಂದರೆ ನಾಳೆ ಫೆಬ್ರವರಿ 10 ಕೆಲ ಪ್ರಮುಖ ಶಾಸಕಾಂಗ ವ್ಯವಹಾರಗಳ ಕುರಿತು ಸದನದಲ್ಲಿ ಚರ್ಚೆ ನಡೆಸಲಾಗುತ್ತದೆ. ಹೀಗಾಗಿ ಎಲ್ಲರು ಕಡ್ಡಾವಾಗಿ ಹಾಜರಾತಿ ಇರಬೇಕು ಎಂದು ಬಿಜೆಪಿ ಮುಖ್ಯ ಸಚೇತಕ ಲಕ್ಷ್ಮೀಕಾಂತ್ ಬಾಜ್‌ಪೇಯ್ ವಿಪ್ ಹೊರಡಿಸಿದ್ದಾರೆ. ಲೋಕಸಭಾ ಚುನಾವಣೆ ಅಖಾಡಕ್ಕಿಳಿಯುವ ಮೊದಲು ನಡೆಯುತ್ತಿರುವ ಕೊನೆಯ ಅಧಿವೇಶನ ಇದಾಗಿದೆ. ಹೀಗಾಗಿ ಪ್ರಧಾನಿ ಮೋದಿ ಸರ್ಕಾರ ಕೆಲ ಅಚ್ಚರಿ ನೀಡುವ ಸಾಧ್ಯತೆ ಎಂದು ರಾಜಕೀಯ ತಜ್ಞರು ವಿಶ್ಲೇಷಿಸುತ್ತಿದ್ದಾರೆ.

ಸದನದಲ್ಲಿ ಕೆಲ ಮಹತ್ವದ ವಿಷಯಗಳ ಕುರಿತು ಚರ್ಚೆ ನಡೆಸಲು ಉದ್ದೇಶಿಸಲಾಗಿದ್ದು, ಉಭಯ ಸದನದಲ್ಲಿ ಈ ಕುರಿತು ಚರ್ಚೆ ನಡೆಯಲಿದೆ. ಹೀಗಾಗಿ ಬಿಜೆಪಿಯ ಲೋಕಸಭಾ ಹಾಗೂ ರಾಜ್ಯಸಭೆಯ ಎಲ್ಲಾ ಸದಸ್ಯರು ಎರಡೂ ಸದನದಲ್ಲಿ ಹಾಜರರಿಬೇಕು. ಸಂಪೂರ್ಣ ದಿನ ಸದನದಲ್ಲಿ ಹಾಜರಿದ್ದು, ಸರ್ಕಾರದ ನಿರ್ಧಾರವನ್ನು ಬೆಂಬಲಿಸಲು ಈ ಮೂಲಕ ಕೋರಲಾಗಿದೆ ಎಂದು ಲಕ್ಷ್ಮೀಕಾಂತ್ ಬಾಜ್‌ಪೇಯ್ ವಿಪ್ ಹೊರಡಿಸಿದ್ದಾರೆ.

**ಶ್ವೇತಪತ್ರ ಕೋಲಾಹಲ**

ಇನ್ನು ಕೇಂದ್ರ ಸರ್ಕಾರ ಸದನದಲ್ಲಿ ಮಂಡಿಸಿರುವ ಶ್ವೇತಪತ್ರ ಕೋಲಾಹಲ ಸೃಷ್ಟಿಸಿದ್ದು, ಹಿಂದಿನ ಮನಮೋಹನ ಸಿಂಗ್ ಅವಧಿಯ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ 10 ವರ್ಷಗಳ ಅವಧಿಯಲ್ಲಿ ದೇಶವನ್ನು ಎಲ್ಲಾ ರಂಗದಲ್ಲೂ ಅಧಃಪತನದತ್ತ ಕೊಂಡೊಯ್ದಿದೆ ಎಂದು ಎನ್‌ಡಿಎ ಸರ್ಕಾರ ಶ್ವೇತಪತ್ರ ಬಿಡುಗಡೆ ಮಾಡಿದೆ. '2004ರಲ್ಲಿ ಎನ್‌ಡಿಎ ಸರ್ಕಾರದ ಆಡಳಿತ ಅಂತ್ಯಗೊಂಡು ಯುಪಿಎ ಸರ್ಕಾರಕ್ಕೆ ಆಡಳಿತಕ್ಕೆ ಬಂದಾಗ ಆರೋಗ್ಯಕರ ಆರ್ಥಿಕತೆಯನ್ನು ದೇಶ ಹೊಂದಿತ್ತು. ಆದರೆ 2004ರಿಂದ 2014ರವರೆಗಿನ 10 ವರ್ಷಗಳಲ್ಲಿ ಯುಪಿಎ ಸರ್ಕಾರ ಈ ಆರ್ಥಿಕತೆಯನ್ನು ಹಾಳುಮಾಡಿತು ಎಂದು ದಾಖಲೆ ಸಮೇತ ಶ್ವೇತಪತ್ರದಲ್ಲಿ ಕೇಂದ್ರ ಸರ್ಕಾರ ಗಂಭೀರ ಆರೋಪ ಮಾಡಿದೆ.

ಅಲ್ಲದೆ ಶ್ವೇತಪತ್ರದಲ್ಲಿ ಕಲ್ಲಿದ್ದಲು ಹಗರಣವನ್ನು ಉಲ್ಲೇಖಿಸಲಾಗಿದ್ದು, ಕಲ್ಲಿದ್ದಲು ನಿಕ್ಷೇಪಗಳ ಹಂಚಿಕೆಯನ್ನು "ನಿರಂಕುಶ ಆಧಾರದ ಮೇಲೆ" ಮಾಡಲಾಗಿದೆ ಎಂದು ಕೇಂದ್ರ ಆರೋಪಿಸಿದೆ.

ಫೆ.27ರಂದು ರಾಜ್ಯಸಭಾ ಚುನಾವಣೆ ರಾಜ್ಯಸಭೆಯಲ್ಲಿ ತೆರವಾಗಿರುವ ಸ್ಥಾನಗಳಿಗೆ ಫೆಬ್ರವರಿ 27ರಂದು ಚುನಾವಣೆ ನಡೆಯಲಿದೆ. ಫೆಬ್ರವರಿ 15 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಫೆಬ್ರವರಿ27ರ ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆ ವರೆಗೆ ಮತದಾನ ನಡೆಯಲಿದ್ದು, ಅದೇ ದಿನ ಮತ ಎಣಿಕೆ ನಡೆಯಲಿದೆ. ಈ ಎಲ್ಲಾ ಕಾರಣಗಳಿಂದ ನಾಳಿನ ಕಲಾಪ ಅತ್ಯಂತ ಕುತೂಹಲ ಕೆರಳಿಸಿದೆ.

## ಮದರಸಾ ಧ್ವಂಸ ಪ್ರಕರಣದಿಂದ ಉದಿಗ್ನಗೊಂಡ ಉತ್ತರಾಖಂಡ

ಹಾಲ್ದ್ವನಿ: ಉತ್ತರಾಖಂಡದ ಹಾಲ್ದ್ವನಿಯಲ್ಲಿ ಅಕ್ರಮ ಮದರಸಾ ಮತ್ತು ಪಕ್ಕದ ಮಸೀದಿ ಧ್ವಂಸಕ್ಕೆ ಸಂಬಂಧಿಸಿದಂತೆ ವ್ಯಾಪಕ ಹಿಂಸಾಚಾರದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಮತ್ತು 250 ಮಂದಿ ಗಾಯಗೊಂಡಿದ್ದಾರೆ.

ನಗರವನ್ನು ಕರ್ಫ್ಯೂ ಅಡಿಯಲ್ಲಿ ಇರಿಸಲಾಗಿದೆ, ಗಲಭೆಕೋರರ ವಿರುದ್ಧ ಶೂಟ್-ಆಟ್-ಸೈಟ್ ಆದೇಶಗಳನ್ನು ಹೊರಡಿಸಲಾಗಿದೆ ಮತ್ತು ಇಂಟರ್ನೆಟ್ ಸೇವೆಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿದೆ.



ನ್ಯಾಯಾಲಯದ ಆದೇಶದ ನಂತರ ಪೊಲೀಸರೊಂದಿಗೆ ಸರ್ಕಾರಿ ಅಧಿಕಾರಿಗಳ ತಂಡವು ಕಟ್ಟಡಗಳನ್ನು ನೆಲಸಮ ಗೊಳಿಸಲು ಪ್ರಯತ್ನಿಸಿದಾಗ ಘರ್ಷಣೆಯು ಕುದಿಯುವ ಹಂತವನ್ನು ತಲುಪಿತು. ಮದ್ರಸಾ ಮತ್ತು ಮಸೀದಿಯನ್ನು ಆಡಳಿತವು ಕಾನೂನು ಬಾಹಿರವೆಂದು ಘೋಷಿಸಿತು, ಇದು ಅದರ ಧ್ವಂಸಕ್ಕೆ ಕಾರಣವಾಯಿತು. ಜಿಲ್ಲಾಡಳಿತದ ನಿರ್ಧಾರ ಘರ್ಷಣೆಗೆ ಕಾರಣವಾಗಿದ್ದು, ಗಲಭೆಯಲ್ಲಿ 50 ಕ್ಕೂ ಹೆಚ್ಚು ಪೊಲೀಸರಿಗೆ ಗಾಯಗಳಾಗಿವೆ ಹಾಗೂ ಹಲವಾರು ಆಡಳಿತ ಅಧಿಕಾರಿಗಳು, ಪುರಸಭೆಯ ಕಾರ್ಯಕರ್ತರು ಮತ್ತು ಪತ್ರಕರ್ತರು ಸಹ ಜನಾಕ್ರೋಶಕ್ಕೆ ಗುರಿಯಾಗಿದ್ದಾರೆ.

ದೊಡ್ಡ ಗುಂಪೊಂದು ಅಧಿಕಾರಿಗಳ ಮೇಲೆ ಕಲ್ಲುಗಳನ್ನು ಎಸೆದರು, ಅಶ್ರುವಾಯು ಮೂಲಕ ಪ್ರತೀಕಾರ ತೀರಿಸಲು ಪೊಲೀಸರನ್ನು ಪ್ರೇರೇಪಿಸಿತು. ಪೊಲೀಸ್ ಠಾಣೆಯ ಹೊರಗೆ ವಾಹನಗಳಿಗೆ ಬೆಂಕಿ ಹಚ್ಚಿದ್ದರಿಂದ ಹಿಂಸಾಚಾರ ಹೆಚ್ಚಾಯಿತು. ಭಾರೀ ಪೊಲೀಸ್ ಮತ್ತು ಪ್ರಾಂತೀಯ ಸಶಸ್ತ್ರ ಕಾನ್ಸ್‌ಟೆಬ್ಯುಲರಿ (ಪಿಎಸಿ) ಉಪಸ್ಥಿತಿಯೊಂದಿಗೆ ಕೆಡವುವಿಕೆ ಗಳನ್ನು ನಡೆಸಲಾಯಿತು, ಇದು ಮದ್ರಸಾ ಮತ್ತು ಮಸೀದಿಯಿಂದ ಅತಿಕ್ರಮಿಸಲ್ಪಟ್ಟಿದೆ ಎಂದು ಹೇಳಲಾದ ಸರ್ಕಾರಿ ಭೂಮಿಯನ್ನು ತೆರವುಗೊಳಿಸುವ ಗುರಿಯನ್ನು ಹೊಂದಿದೆ. ಕೋರ್ಟಿನ ಆದೇಶಕ್ಕೆ ಬದ್ಧವಾಗಿದೆ ಎಂದು ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಪ್ರಹ್ಲಾದ್ ಮೀನಾ ತಿಳಿಸಿದ್ದಾರೆ.

## ಪೋಷಕರಿಂದ ಪ್ರೀತಿಗೆ ವಿರೋಧ; ಅಪ್ರಾಪ್ತೆ ನೇಣಿಗೆ ಶರಣು



ರಾಯಚೂರು: ಪ್ರೀತಿಗೆ ಪೋಷಕರು ವಿರೋಧ ವ್ಯಕ್ತಪಡಿಸಿದರೆಂದು ಮನನೊಂದು ಅಪ್ರಾಪ್ತೆಯೊಬ್ಬಳು ಆತ್ಮಹತ್ಯೆಗೆ ಶರಣಾದ ಘಟನೆ ರಾಯಚೂರಿನಲ್ಲಿ ನಡೆದಿದೆ.

ಸಂಗೀತಾ (17) ಆತ್ಮಹತ್ಯೆ ಮಾಡಿಕೊಂಡ ಅಪ್ರಾಪ್ತೆ. ರಾಯಚೂರು ಜಿಲ್ಲೆ ಮಾನ್ವಿ ಪಟ್ಟಣದಲ್ಲಿ ಈ ಘಟನೆ ನಡೆದಿದೆ.

ಸಂಗೀತಾಗೆ ಕಾರ್ ಡ್ರೈವರ್ ಕೃಷ್ಣ ಎಂಬಾತನ ಜೊತೆಗೆ ಪ್ರೇಮಾಂಕುರವಾಗಿತ್ತು. ಈ ಹಿಂದೆ 2 ಬಾರಿ ಕೃಷ್ಣನ ಜೊತೆಗೆ ಈಕೆ ಮನೆಬಿಟ್ಟು ಹೋಗಿದ್ದಳು. ಆಗ ಹೆತ್ತವರು ಬುದ್ದಿವಾದ ಹೇಳಿ ಮನೆಗೆ ಕರೆ ತಂದಿದ್ದರು. ಕೊನೆಗೆ ಮನನೊಂದು ಮನೆಯಲ್ಲಿಯೇ ಸಂಗೀತಾ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಮನೆಯಲ್ಲಿದ್ದ ಸೀರೆಯಿಂದ ನೇಣುಬಿಗಿದುಕೊಂಡು ಸಂಗೀತಾ ಸಾವಿಗೆ ಶರಣಾಗಿದ್ದಾಳೆ. ಈಕೆಯ ಮೃತದೇಹವನ್ನು ಮಾನ್ವಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಅಪ್ರಾಪ್ತೆಯ ಅತ್ಯಾಚಾರ ಆರೋಪದ ಪ್ರಕರಣದಲ್ಲಿ ಆರೋಪಿ ಕೃಷ್ಣನನ್ನು ಪೊಲೀಸರು ಬಂಧಿಸಿದ್ದಾರೆ. ಈ ಸಂಬಂಧ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಎಸ್‌ಎಸ್‌ಎಲ್‌ಸಿ ಜೀವನದ ಅತ್ಯಂತ ಮಹತ್ವದ ಘಟ್ಟ: ಶಿವಶಂಕರ ಹಾದಿಮನಿ

ಬೆಳಗಾವಿ: ಎಸ್.ಎಸ್. ಎಲ್ .ಸಿ ವಿದ್ಯಾರ್ಥಿಗಳ ಪಾಲಿಗೆ ಅತ್ಯಂತ ಮಹತ್ವದ ಘಟ್ಟವಾಗಿದ್ದು ನಿಮ್ಮತಂದೆ-ತಾಯಿ ನಿಮ್ಮೆಲ್ಲರ ಜೀವನದ ಬಗ್ಗೆ ಕಂಡಕನಸನ್ನು ಸಾಕಾರಗೊಳಿಸಿ ಎಂದು ಬೆಳಗಾವಿಯ ಸರ್ದಾರ್ಸ್ ಪ್ರೌಢಶಾಲೆಯ ಉಪಪ್ರಾಚಾರ್ಯ ಶಿವಶಂಕರ ಹಾದಿಮನಿ ಕರೆ ನೀಡಿದರು.

ಕೆಎಲ್‌ಇ ಸಂಸ್ಥೆಯ ಗಿಲಗಂಚಿ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಶುಕ್ರವಾರ ನಡೆದ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಅವರು ಮಾತನಾಡಿದರು.



ವಿದ್ಯಾರ್ಥಿಗಳ ಜೀವನದ ಮಹತ್ವದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜವಾಬ್ದಾರಿ ಮರೆಯಬೇಕು. ನಿಮ್ಮ ತಂದೆ-ತಾಯಿ ನಿಮ್ಮ ಬಗ್ಗೆ ಹಲವಾರು ಶ್ರೇಷ್ಠ ಕನಸುಗಳನ್ನು ಕಂಡಿರುತ್ತಾರೆ. ಅದನ್ನು ನನಸು ಮಾಡುವ ಮಹತ್ತರ ಹೊಣೆ ನಿಮ್ಮ ಮೇಲಿದೆ. ಭವಿಷ್ಯದ ಬಗ್ಗೆ ಉತ್ತಮ ಕನಸುಗಳನ್ನು ಕಂಡು ಅದನ್ನು ಸಾಕಾರಗೊಳಿಸಿಕೊಳ್ಳಿ. ಈ ಮೂಲಕ ಅವರು ನಿಮ್ಮ ಜೀವನದ ಕನಸನ್ನು ನನಸು ಮಾಡಿ. ನೀವೆಲ್ಲರೂ ಈ ವರ್ಷದ ಎಸ್‌ಎಸ್‌ಎಲ್ ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶತರಬೇಕು ಎಂದು ಅವರು ಕಿವಿಮಾತು ಹೇಳಿದರು.

ಉಪ ಪ್ರಾಚಾರ್ಯಎಸ್. ಆರ್.ಗದಗ ಅಧ್ಯಕ್ಷತೆ ವಹಿಸಿ ಮಾತನಾಡಿ, ಎಸ್‌ಎಸ್‌ಎಲ್ ಸಿ ಪರೀಕ್ಷೆಗೆ ಬೇಕಾದಅಗತ್ಯ ಮುನ್ನೆಚ್ಚರಿಕೆ ಪಡೆದು ಕೊಂಡು ಸಾಧನೆ ಮಾಡುವಂತೆ ತಿಳಿಸಿದರು.

ಶಿಕ್ಷಕಿ ಎ.ಆರ್.ಪಾಟೀಲ ಮಾತನಾಡಿ, ಗುರು-ಶಿಕ್ಷಕರ ಸಂಬಂಧ ಮೊದಲಿನಂತೆ ಇಲ್ಲ. ಅದನ್ನು ಕಾಪಾಡಿಕೊಂಡು ಹೋಗಬೇಕು. ಎಸ್‌ಎಸ್‌ಎಲ್ ಸಿ ಪರೀಕ್ಷೆಗೆ ಕೆಲವೇ ಕೆಲವು ಕೆಲ ದಿನಗಳು ಮಾತ್ರ ಉಳಿದಿದೆ. ಹಾರ್ಡ್ ವರ್ಕ, ನಿರಂತರ ಶ್ರಮದಿಂದ ಓದಿದರೆಅದರ ಫಲ ಸಿಕ್ಕೆ ಸಿಗುತ್ತದೆ. ಕಠಿಣ ಪರಿಶ್ರಮದಿಂದ ಓದಿ ಸಾಧನೆ ಮಾಡಬೇಕು. ಸತತ ಪ್ರಯತ್ನ ಮಾಡಿದರೆ ಯಶಸ್ಸು ಕಟ್ಟಿಟ್ಟ ಬುತ್ತಿ. ಜೀವನದಲ್ಲಿ ಮಾನವೀಯ ಗುಣಗಳು, ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ಶಿಕ್ಷಕಿ ವಿಶಾಲಾಕ್ಷಿ. ಐ. ಅಂಗಡಿ ಮಾತನಾಡಿ, ಜೀವನದಲ್ಲಿ ಗುರಿ ಇಟ್ಟು ಅದನ್ನು ಸಾಧಿಸಲು ಪಣತೊಡಬೇಕು ಎಂದು ಕಿವಿಮಾತು ಹೇಳಿದರು.

ಪ್ರಾಚಾರ್ಯ ಆರ್.ಎಸ್. ಪಾಟೀಲ, ಒಕ್ಕೂಟದ ಕಾರ್ಯಾಧ್ಯಕ್ಷ ಆರ್. ಎಂ.ಮಗದುಮ್ಮ, ವಿದ್ಯಾರ್ಥಿ ಪ್ರತಿನಿಧಿ ಸಂಪತಗೌಡ ಪಾಟೀಲ ಉಪಸ್ಥಿತರಿದ್ದರು.

ಪಾರ್ವತಿ ಚಿಮ್ಮಡ, ಸೀಮಾ ಕೋರೆ, ಪ್ರಭು ನಿಡೋಣಿ, ಹನುಮಂತ ವೀರಗಂಟಿ ಜಂಟಿಯಾಗಿ ಕಾರ್ಯಕ್ರಮ ನಿರೂಪಿಸಿದರು. ಕಾವೇರಿ ಪಟ್ಟಣ ಸ್ವಾಗತಿಸಿದರು. ರವಿ ಮುಳಕೂರ ವಂದಿಸಿದರು.

# ಶಿವಯೋಗಿ ಶ್ರೀಸಿದ್ಧರಾಮೇಶ್ವರ ಶೀಘ್ರದಲ್ಲೇ ತೆರೆಗೆ

ಹುಬ್ಬಳ್ಳಿ: ಓಂಕಾರ ಮೂವೀಸ್‌ರವರ ಶ್ರೀಮತಿ ಸುಜಾತ ರಾಜ್‌ಕುಮಾರ್ ಅರ್ಪಿಸುವ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಎಂಬ ಭಕ್ತಿಪ್ರಧಾನ ಕನ್ನಡ ಸಿನಿಮಾ ಸಧ್ಯದಲ್ಲಿಯೇ ತೆರೆಗೆ ಬರಲಿದೆ ಎಂದು ನಿರ್ದೇಶಕ ಪುರುಷೋತ್ತಮ್ ಓಂಕಾರ್ ಸ್ವಾಮಿಯವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈಗಾಗಲೇ ಇಪ್ಪತ್ತೈದಕ್ಕೂ ಹೆಚ್ಚು ಭಕ್ತಿ ಚಲನಚಿತ್ರಗಳನ್ನು ನೀಡಿರುವ ನಾನು ಈಗ ಶಿವಶರಣ ಸಿದ್ಧರಾಮೇಶ್ವರರ ಕುರಿತು ಚಿತ್ರ ನಿರ್ದೇಶಿಸುತ್ತಿದ್ದು ಈ ಚಿತ್ರದಲ್ಲಿ ನಾಯಕ ನಟರಾಗಿ ಉತ್ತರ ಕರ್ನಾಟಕದ ಬೈಲಹೊಂಗಲದ ಯುವ ಪ್ರತಿಭೆ ರಾವಣ ಕತ್ತಿಯವರು ಸಿದ್ಧರಾಮೇಶ್ವರನಾಗಿ ಅಭಿನಯಿಸಿದ್ದಾರೆ. ಒಂದು ಪೌರಾಣಿಕ ಕಥೆಯನ್ನು ಈಗಿನ ಕಾಲದ ತಾಂತ್ರಿಕತೆಯೊಂದಿಗೆ ಸಿದ್ಧಪಡಿಸಲಾಗಿದ್ದು ಸಿದ್ಧರಾಮೇಶ್ವರರ




ಪವಾಡಗಳೊಂದಿಗೆ ಮನರಂಜನೆಯನ್ನು ಪೂರ್ಣ ತೋರಿಸಲಾಗಿದೆ. ಹನ್ನೆರಡನೆ ಶತಮಾನದ ಸನ್ನಿವೇಷಗಳನ್ನು ಸೃಷ್ಟಿಸಿದ್ದೇವೆ ಎಂದರು.

ಈಗಿನ ಕಾಲದ ಜನರಿಗೆ ಸಂತ ಮಹಾತ್ಮರ ಸಂಗತಿಗಳನ್ನು ಮನರಂಜನಾತ್ಮಕವಾಗಿ ಮುಟ್ಟಿಸಲು ಎನ್ ಎಸ್ ರಾಜಕುಮಾರ್ ಎನ್ನುವವರು ಈ ಚಿತ್ರಕ್ಕೆ ಬಂಡವಾಳವನ್ನು ಹೂಡಿಕೆ ಮಾಡಿದ್ದು ಹಾಗೂ ಸಹ ನಿರ್ಮಾಪಕರಾಗಿ ನಾನು ಸುನೀಲ್ ಕುಮಾರ್ ಕೈಜೋಡಿಸಿದ್ದೇನೆ.ಈ ಚಿತ್ರದಲ್ಲಿ ಎರಡು ಹಾಡುಗಳು ಹಾಗೂ 4 ವಚನಗಳಿದ್ದು ಸಂಗೀತ ಸಂಯೋಜನೆ ರಾಜ್ ಭಾಸ್ಕರ್ ಮಾಡಿದ್ದಾರೆ. ಛಾಯಾಗ್ರಹಣ ಗೌರಿ ವೆಂಕಟೇಶ್. ಚಿತ್ರದ ಎಡಿಟಿಂಗ್ ಕಲರ್ ಕರೆಕ್ಷನ್ ಹಾಗೂ ಗ್ರಾಫಿಕ್ಸ್ ಆರ್ ಅನಿಲ್ ಕುಮಾರ್ ,ಪತ್ರಿಕಾಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಅವರದಿದೆ, ಮುಖ್ಯತಾರಾಗಣದಲ್ಲಿ ರಾವಣ ಕತ್ತಿ, ಗಣೇಶ್ ರಾವ್ ಕೇಸರಕರ್,ನಾಗೇಂದ್ರ ಅರಸು ,ಬಸವರಾಜ್, ರಕ್ಷ ಗೌಡ ಹಾಗೂ ಮುಂತಾದವರು ಅಭಿನಯಿಸಿದ್ದಾರೆ. ಈ ಚಿತ್ರವು ಅತಿ ಶೀಘ್ರದಲ್ಲಿ ಬೆಳ್ಳಿತೆರೆಯನ್ನು ಅಲಂಕರಿಸಲು ಸಿದ್ಧವಾಗಿದೆ.

ಭಕ್ತಿ ಪ್ರಧಾನವಾದ ಸಿನಿಮಾಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯ ,ನಾನು ಕಮ್ಮರ್ಷಿಯಲ್ ಸಿನಿಮಾ ,ಸಿರಿಯಲ್‌ಗಳನ್ನು ಮಾಡಿದವ, ಈಗ ಕೆಲವು ಚಾನೆಲ್‌ಗಳಲ್ಲಿ ನನ್ನ ಸಿರಿಯಲ್ ನಡೆಯುತ್ತಿವೆ. ಈಗ ಭಕ್ತ ಪ್ರಧಾನ ಚಲನಚಿತ್ರ ಮಾಡುತ್ತಿರುವೆ ಎಂದು ಸಹನಿರ್ಮಾಪಕ ಸುನೀಲಕುಮಾರ ಹೇಳಿದರು.

ನಾಯಕ ನಟ ರಾವಣ ಕತ್ತಿ ಮಾನಾಡಿ,ಶರಣರ ಬದುಕು ,ಅವರು ಸಮಾಜಕ್ಕೆ ನೀಡಿದ ಸಂದೇಶವನ್ನು ಜನರಿಗೆ ತಿಳಿಸಲು ಈ ಸಿನಿಮಾ ಮಾಡಲಾಗಿದೆ.

ಬೇರೆ ಬೇರೆ ಹಲವು ಸಿನಿಮಾಗಳ ನಡುವೆ ಭಕ್ತಿ ಪ್ರಧಾನವಾದ ಸಿನಿಮಾ ನೋಡಿ ಉತ್ತರ ಕರ್ನಾಟಕದ ನಿಮ್ಮ ಮನೆಯ ಮಗನನ್ನು ಬೆಳೆಸಿ ಹಾರೈಸಿ ಎಂದರು. ರಕ್ಷಾಗೌಡ,ಪ್ರಮೀಳಾ ಸುಬ್ರಹ್ಮಣ್ಯ ಚಿತ್ರವನ್ನು ಚಿತ್ರಮಂದಿರದಲ್ಲೇ ನೋಡಿ ಪ್ರೋತ್ಸಾಹಿಸಿ ಮಾಧ್ಯಮದ ಬಂಧುಗಳು ನೋಡಿ ಅಭಿಪ್ರಾಯ ತಿಳಿಸಿ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಹ ನಿರ್ಮಾಪಕರಾದ ಸುನಿಲ್ ಕುಮಾರ್, ನಿರ್ದೇಶಕರಾದ ಪುರುಷೋತ್ತಮ್ ಓಂಕಾರ್ ಸ್ವಾಮಿ, ನಾಯಕ ನಟರಾದ ರಾವಣ ಕತ್ತಿ, ಪೋಷಕ ಪಾತ್ರಧಾರಿಯಾದ ರಕ್ಷಾ ಗೌಡ ,ಪ್ರಮೀಳಾ ಸುಬ್ರಹ್ಮಣ್ಯ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಇತರರು ಇದ್ದರು.

## ಜಿಲ್ಲಾಸ್ಪತ್ರೆ ಆಪರೇಷನ್ ಥಿಯೇಟರ್‌ನಲ್ಲಿ ಪ್ರಿ-ವೆಡ್ಡಿಂಗ್ ಶೂಟ್



ಚಿತ್ರದುರ್ಗ: ಇತ್ತೀಚಿನ ದಿನಗಳಲ್ಲಿ ಪ್ರಿ-ವೆಡ್ಡಿಂಗ್ ಹಾಗೂ ಪೋಸ್ಟ್ ವೆಡ್ಡಿಂಗ್ ಫೋಟೋಶೂಟ್ಗಳು ವಿವಿಧ ರೀತಿಯಲ್ಲಿ ನಡೆಯುತ್ತವೆ. ಅಂತೆಯೇ ಚಿತ್ರದುರ್ಗದ ಜಿಲ್ಲಾಸ್ಪತ್ರೆ ಯಲ್ಲಿ ವೈದ್ಯರೊಬ್ಬರು ಪ್ರಿ-ವೆಡ್ಡಿಂಗ್ ವೀಡಿಯೋ ಶೂಟ್ ಮಾಡಿ ಎಡವಟ್ಟು ಮಾಡಿಕೊಂಡ ಘಟನೆ ನಡೆದಿರುವ ಬಗ್ಗೆ ಬೆಳಕಿಗೆ ಬಂದಿದೆ.

ಭರಮಸಾಗರ ಮೂಲದ ಜಿಲ್ಲಾಸ್ಪತ್ರೆಯ ಗುತ್ತಿಗೆ ಆಧಾರಿತ ವೈದ್ಯ ಡಾ.ಅಭಿಷೇಕ್ ಎಡವಟ್ಟು ಮಾಡಿಕೊಂಡವರು. ಚಿತ್ರದುರ್ಗ ತಾಲೂಕಿನ ಭರಮಸಾಗರ ಗ್ರಾಮದಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿ ಈ ಘಟನೆ ನಡೆದಿದೆ.

ವ್ಯಕ್ತಿಗೆ ಆಪರೇಷನ್ ಮಾಡುತ್ತಿರುವಂತೆ ಜೋಡಿ ವೀಡಿಯೋ ಶೂಟ್ ಮಾಡಿಕೊಂಡಿದೆ. ಸದ್ಯ ಡಾ. ಅಭಿಷೇಕ್ ಜೋಡಿಯ ಪ್ರಿ-ವೆಡ್ಡಿಂಗ್ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ಜೊತೆಗೆ ವೈದ್ಯರ ನಡೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ. ಸರ್ಕಾರಿ ಆಸ್ಪತ್ರೆಯ ಆಪರೇಷನ್ ಥಿಯೇಟರ್ ದುರ್ಬಳಕೆ ಬಗ್ಗೆ ಜನ ಕಿಡಿಕಾರುತ್ತಿದ್ದಾರೆ.

# ಭೂ- ದಾನಿ ಮರೆಪ್ಪ ಅವರ ಕಾರ್ಯ ಶ್ಲಾಘನೀಯ: ಶಾಸಕ ಬಾಲಚಂದ್ರ ಜಾರಕಿಹೊಳಿ ಪ್ರಶಂಸೆ

ಮೂಡಲಗಿಯಲ್ಲಿ ಐದು ಕೋಟಿ ರೂಪಾಯಿ ವೆಚ್ಚದ ಚರ್ಚ್ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ- ದಿನೇ ದಿನೇ ಅಭಿವೃದ್ಧಿ ಹೊಂದುತ್ತಿರುವ ಮೂಡಲಗಿಯಂತಹ ಪಟ್ಟಣ ಪ್ರದೇಶದಲ್ಲಿ ದುಡ್ಡು ನೀಡಿದರೂ ನಿವೇಶನಗಳು ಸಿಗದ ಇಂದಿನ ದಿನಗಳಲ್ಲಿ ಚರ್ಚ ನಿರ್ಮಾಣಕ್ಕೆ 17 ಗುಂಟೆ ನಿವೇಶನವನ್ನು ದಾನ ಮಾಡಿ ಸಮಾಜಕ್ಕೆ ಮಾದರಿಯಾದ ಮರೆಪ್ಪ ಮರೆಪ್ಪಗೋಳ ಅವರ ಸಾಮಾಜಿಕ ಕಾರ್ಯಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಪ್ರಶಂಸೆಯನ್ನು ವ್ಯಕ್ತಪಡಿಸಿದರು.

ಪಟ್ಟಣದ ರಾಜೀವ ಗಾಂಧಿ ನಗರದಲ್ಲಿ ಸುಮಾರು 5 ಕೋ. ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಚರ್ಚ್ ನಿರ್ಮಾಣ ಕಾಮಗಾರಿಗೆ ಬುಧವಾರದಂದು ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಸಾಮಾಜಿಕ ಕಳಕಳಿಯುಳ್ಳ ಮರೆಪ್ಪ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಅವರ ಕುಟುಂಬ ಸದಸ್ಯರನ್ನು ಅಭಿನಂದಿಸಿದರು.

ಮೂಡಲಗಿಯಲ್ಲಿ ಕ್ರೈಸ್ತ ಬಾಂಧವರು ಚರ್ಚ್ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಈಗಿರುವ ಚರ್ಚ್ ಕಟ್ಟಡವನ್ನು ಮರು ನಿರ್ಮಾಣಕ್ಕೆ ಕೈ ಹಾಕಿದ್ದಾರೆ. ಇದಕ್ಕಾಗಿ ಸುಮಾರು



ಐದು ಕೋ. ರೂ. ಗಳ ಕ್ರಿಯಾ ಯೋಜನೆಯನ್ನು ರೂಪಿಸಿದ್ದಾರೆ. ಇದರ ಜೊತೆಗೆ ಬಾಂಧವರ ಮದುವೆ ಮತ್ತು ಮತ್ತಿತರ ಕಾರ್ಯಕ್ರಮಗಳಿಗೆ ಅನುಕೂಲವಾಗಲು ಸಮುದಾಯ ಭವನವನ್ನು ನಿರ್ಮಿಸಲು ಮುಂದಾಗಿದ್ದಾರೆ. ಕ್ರೈಸ್ತ ಬಾಂಧವರ ಬೇಡಿಕೆಯಂತೆ ಈ ಮಹತ್ವಪೂರ್ಣ ಕಾಮಗಾರಿ ನಿರ್ಮಾಣಕ್ಕೆ ಸರಕಾರದಿಂದ 3 ಕೋ. ರೂ. ಗಳನ್ನು ಬಿಡುಗಡೆ ಮಾಡಿಸಲಾಗುವುದು. ಈ ಸಂಬಂಧ ಈಗಾಗಲೇ ಸರಕಾರಕ್ಕೆ ಪತ್ರವನ್ನು ಬರೆದಿದ್ದು, ಲೋಕಸಭಾ ಚುನಾವಣೆಯ ಬಳಿಕ ಕಾಮಗಾರಿಗೆ ಅನುದಾನವು ಬಿಡುಗಡೆಯಾಗಲಿದೆ. ಉಳಿದ ಹಣವನ್ನು ಸಮಾಜ ಬಾಂಧವರು ವಂತಿಗೆಯ ಮೂಲಕ ಸಂಗ್ರಹಿಸಬೇಕೆಂದು ಅವರು ಹೇಳಿದರು.

ಎಲ್ಲ ಸಮುದಾಯಗಳು ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಮುಂದೆ ಬರಬೇಕಿದೆ. ಕ್ಷೇತ್ರದಲ್ಲಿ ಶಿಕ್ಷಣದ ಅಮೂಲಾಗ್ರ ಬದಲಾವಣೆಗೆ ನಿರಂತರವಾಗಿ ಶ್ರಮಿಸಲಾಗುತ್ತಿದೆ. ಈ ಬಾಂಧವರು ಸಹ ತಮ್ಮ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಿ ಸಮಾಜದಲ್ಲಿ ಮುಂದೆ ಬರುವಂತೆ ಕೋರಿಕೊಂಡರು.

ನಮ್ಮ ಕ್ಷೇತ್ರದಲ್ಲಿ ಎಲ್ಲ ಸಮಾಜಗಳ ಪರಸ್ಪರ ಸಹೋದರತ್ವ ಮನೋಭಾವನೆ ಯಿಂದ ಬಾಳುತ್ತಿದ್ದಾರೆ. ಸಾಮರಸ್ಯವನ್ನು ಕಾಪಾಡುವ ಮೂಲಕ ಇತರರಿಗೆ ಮಾದರಿಯಾಗುವ ಕೆಲಸಗಳನ್ನು ಮಾಡುತ್ತಿದ್ದಾರೆ. ಅರಭಾವಿ ಕ್ಷೇತ್ರದಂತಹ ಮತದಾರರನ್ನು ಪಡೆದಿರುವುದು ನಾನೇ ಪುಣ್ಯವಂತನೆಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮೂಡಲಗಿ ಚರ್ಚ್ ಸಭಾ ಪಾಲಕ ರೇ. ವಿಜಯಕುಮಾರ, ಭೂ- ದಾನಿ ಮರೆಪ್ಪ ಮರೆಪ್ಪಗೋಳ, ಚಾರ್ಟರ್ಡ್ ಅಕೌಂಟೆಂಟ್ ಸೈದಪ್ಪ ಗದಾಡಿ, ರವೀಂದ್ರ ಸಣ್ಣಕ್ಕಿ, ರಮೇಶ ಸಣ್ಣಕ್ಕಿ, ರವೀಂದ್ರ ಸೋನವಾಲ್ಕರ, ಪ್ರಭಾಕರ, ಬಂಗೆನ್ನವರ,ಹಣಮಂತ ಹವಳೆಪ್ಪಗೋಳ, ಸಂತೋಷ ಸೋನವಾಲಕರ, ಎಬೇಜೆನರ್ ಕರಬನ್ನವರ, ಹಣಮಂತ ಗುಡ್ಲಮನಿ, ವಿಜಯ ಮೂಡಲಗಿ, ಡಾ. ವೀಣಾ ಕನಕರೆಡ್ಡಿ, ಗಿರೀಶ ಢವಳೇಶ್ವರ, ಡಾ. ಎಸ್.ಎಸ್ ಪಾಟೀಲ, ಡಾ. ಅನೀಲ ಪಾಟೀಲ, ಈರಪ್ಪ ಬನ್ನೂರ, ಅನ್ವರ ನದಾಫ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

NEWS

ಬೆಳಗಾವಿ ವರದಿ

SATURDAY, 10 FEBRUARY 2024

# ಇಬ್ಬರು ಅಧಿಕಾರಿಗಳ ಜಟಾಪಟಿ;

## ಕೊಠಡಿಗೆ ಬೀಗ ಹಾಕಿ, ಠಾಣೆ ಮೆಟ್ಟಿಲೇರಿದ ಗಲಾಟೆ



ಮೈಸೂರು: ಒಂದೇ ಹುದ್ದೆಗೆ ಇಬ್ಬರು ಅಧಿಕಾರಿಗಳು ಜಟಾಪಟಿ ನಡೆಸಿದ ಘಟನೆ ಮೈಸೂರಿನ ಹೂಟಗಳ್ಳಿ ನಗರಸಭೆಯಲ್ಲಿ ನಡೆದಿದೆ.

ಹೂಟಗಳ್ಳಿ ನಗರಸಭೆಯ ಕಮಿಷನರ್ ಹುದ್ದೆಗಾಗಿ ಹಾಲಿ ಕಮಿಷನರ್ ಸಂದೀಪ್ ಮತ್ತು ಈ ಹಿಂದೆ ಇದೇ ನಗರಸಭೆ ಕಮಿಷನರ್ ಆಗಿದ್ದ ನರಸಿಂಹಮೂರ್ತಿ ಎಂಬುವವರ ನಡುವೆ ಕಿತ್ತಾಟ ಶುರುವಾಗಿದೆ. ಈ ಹಿಂದೆ ಇಬ್ಬರು ಅಧಿಕಾರಿಗಳು ಕೋರ್ಟ್ ಮೆಟ್ಟಿಲೇರಿದ್ದಾರೆ.

ಫೆ.08 ಏಕಾಏಕಿ ನಗರಸಭೆಗೆ ಆಗಮಿಸಿದ ನರಸಿಂಹಮೂರ್ತಿ ಅವರು, ಕಮಿಷನರ್ ಕೊಠಡಿಗೆ ಬೀಗ ಹಾಕಿಕೊಂಡು ಹೋಗಿದ್ದಾರೆ. ಹಾಲಿ ನಗರಸಭೆ ಕಮಿಷನರ್ಯಿಂದ ಠಾಣೆಗೆ ದೂರು ಬೆಳಿಗ್ಗೆ ಎಂದಿನಂತ ಕರ್ತವ್ಯಕ್ಕೆ ಬಂದ ಕಮಿಷನರ್ ಸಂದೀಪ್ಗೆ ಶಾಕ್ ಆಗಿದೆ. ಕೊಡಲೇ ಕಮಿಷನರ್ ಕೊಠಡಿ ಆಚೆಯೇ ಟೇಬಲ್ ಹಾಕಿ ಕುಳಿತು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಬಂದಂತಹ ಜನರ ಸಮಸ್ಯೆಯನ್ನ ಆಲಿಸುತ್ತಿದ್ದಾರೆ. ಜೊತೆಗೆ ಘಟನೆ ಸಂಬಂಧ ಹಾಲಿ ನಗರಸಭೆ ಕಮಿಷನರ್ ಸಂದೀಪ್ ಅವರು ನರಸಿಂಹಮೂರ್ತಿ ವಿರುದ್ಧ ವಿಜಯನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ. ಇಬ್ಬರು ಅಧಿಕಾರಿಗಳ ಗಲಾಟೆಯಿಂದ ಸಾರ್ವಜನಿಕರು ಹೈರಾಣಾಗುವಂತಾಗಿದೆ.

# ಲೋಕಾಯುಕ್ತರ ಬಲೆಗೆ ಡಾಟಾ ಎಂಟ್ರಿ ಆಪರೇಟರ್

ಬೆಳಗಾವಿ: ಜಿಲ್ಲಾ ನೋಂದಣಾಧಿಕಾರಿ ಕಚೇರಿಯಲ್ಲಿ ಲಂಚ ಹಣವನ್ನು ಸ್ವೀಕರಿಸುತ್ತಿದ್ದ ವೇಳೆ ಡಾಟಾ ಎಂಟ್ರಿ ಆಪರೇಟರ್ ಸೋಮಶೇಖರ ರುದ್ರಪ್ಪ ಮಾಸ್ತಮರ್ಡಿ ಲೋಕಾಯುಕ್ತ ಅಧಿಕಾರಿಗಳು ಫೆ. 8 ರಂದು ದಾಳಿ ಮಾಡಿ ಬಂಧಿಸಿದ್ದಾರೆ.

ಅವಿನಾಶ ಚಿಂತಾಮಣಿ ಧಾಮಣಕರ ಸಾ/ ನಂ.331/ಎ, ರಾಯ್ ರಸ್ತೆ, ತಿಲಕವಾಡಿ, ಬೆಳಗಾವಿ. ಇವರು ತಾವು ಖರೀದಿಸಬೇಕಾದ ರಿ.ಸ.ನಂ: 41/3ಎ/1 ನೇದ್ದರಲ್ಲಿರುವ ಪ್ಲಾಟ ನಂ: 13 ಕಂಗ್ರಾಳಿ ಬಿ.ಕೆ ನೇದ್ದರ ಡೆಫಿಸಿಟ್ (ಕೊರತೆ ಮುದ್ರಾಂಕ ದೃಢೀಕರಣ) ಮಾಡಿ ಕೊಡಲು ಬೆಳಗಾವಿ ಜಿಲ್ಲಾ ನೊಂದಣಾಧಿಕಾರಿಗಳ ಕಛೇರಿಯ ಸೋಮಶೇಖರ ರುದ್ರಪ್ಪ ಮಾಸ್ತಮರ್ಡಿ ಡಾಟಾ ಎಂಟ್ರಿ ಆಪರೇಟರ ಇವರ ಕಛೇರಿಗೆ ಅರ್ಜಿ ಸಲ್ಲಿಸಿದ್ದರು.

ಜಿಲ್ಲಾ ನೋಂದಣಾಧಿಕಾರಿ ಕಚೇರಿಯಲ್ಲಿ ಡಾಟಾ ಎಂಟ್ರಿ ಆಪರೇಟರ್ ಆಗಿರುವ ಸೋಮಶೇಖರ 22 ಸಾವಿರ ಲಂಚ ಬೇಡಿಕೆ ಇಟ್ಟಿದ. ಲಂಚ ಕೊಡಲು ಮನಸ್ಸಿಲ್ಲದೇ ಅವಿನಾಶ ಚಿಂತಾಮಣಿ ಧಾಮಣಕರ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಯಲ್ಲಿ ಲೋಕಾಯುಕ್ತ ಪೊಲೀಸ್ ಠಾಣೆ ಬೆಳಗಾವಿಯಲ್ಲಿ ಪ್ರಕರಣ ಸಂಖ್ಯೆ 03/2024 ಕಲಂ 7(ಎ) ಪಿಸಿ ಕಾಯ್ದೆ 1988 (ತಿದ್ದುಪಡಿ– 2018) ರಡಿಯಲ್ಲಿ ದಾಖಲಿಸಿಲಾಗಿರುತ್ತದೆ.

ಅವಿನಾಶನಿಂದ ಸೋಮಶೇಖರ 22 ಸಾವಿರ ರೂ. ಲಂಚ ಹಣವನ್ನು ಸ್ವೀಕರಿಸುವ ವೇಳೆಯಲ್ಲಿ ಯಶಸ್ವಿಯಾಗಿ ಟ್ರ್ಯಾಪ್ ಮಾಡಿ ಬಂದಿಸಿ, ಸೂಕ್ತ ಕಾನೂನು ಕ್ರಮ ಜರುಗಿಸಲಾಗಿದೆ. ಸದರಿ ಟ್ರ್ಯಾಪ್ ಕಾರ್ಯಾಚರಣೆಯನ್ನು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಹನುಮಂತರಾಯ ಇವರ ಮಾರ್ಗದರ್ಶನದಲ್ಲಿ ಲೋಕಾಯುಕ್ತ ಪೊಲೀಸ್ ಇನ್ಸಪೆಕ್ಟರ್ ಯು.ಎಸ್.ಅವಟಿ ಅವರಿಂದ ಬಂಧನ ಕಾರ್ಯಾಚರಣೆ ಕೈಗೊಳ್ಳಲಾಗಿರುತ್ತದೆ.

ಕಾರ್ಯಾಚರಣೆಯಲ್ಲಿ ಪೊಲೀಸ್ ಉಪಾಧೀಕ್ಷಕ ಭರತರೆಡ್ಡಿ, ನಿರಂಜನ್ ಪಾಟೀಲ್, ಅನ್ನಪೂರ್ಣಾ ಹುಲಗೂರ, ಸಿಬ್ಬಂದಿಗಳಾದ ವಿಜಯ ಬಿರಾಜನವರ, ವ್ಹಿ.ಬಿ ಬಸಕ್ರಿ, ಆರ್.ಬಿ ಗೋಕಾಕ್, ಸಂತೋಷ ಬೆಡಗ, ಬಸವರಾಜ ಕೊಡೊಳ್ಳಿ ಅವರು ಭಾಗವಹಿಸಿ ಟ್ರ್ಯಾಪ್ ಯಶಸ್ವಿಗೊಳಿಸಿರುತ್ತಾರೆ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಹನುಮಂತರಾಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷೀರಭಾಗ್ಯದ ಹಾಲಿನ ಪ್ಯಾಕೆಟ್ ಮಾರಾಟ; ಶಿಕ್ಷಕ ಅಮಾನತು



ಯಾದಗಿರಿ: ಶಿಕ್ಷಕನೊಬ್ಬ ಕ್ಷೀರಭಾಗ್ಯ ಯೋಜನೆಯ ಹಾಲಿನ ಪುಡಿ ಪ್ಯಾಕೆಟ್ನ್ನು ಕಿರಾಣಿ ಅಂಗಡಿಯೊಂದಕ್ಕೆ ಮಾರಾಟ ಮಾಡಿ ಅಮಾನತು ಆದ ಘಟನೆ ಯಾದಗಿರಿಯಲ್ಲಿ ನಡೆದಿದೆ.

ಸೂರ್ಯಕಾಂತ್ ಅಮಾನತು ಆದ ಶಿಕ್ಷಕ. ಈತ ಯಾದಗಿರಿ ತಾಲೂಕಿನ ಲಿಂಗೇರಿ ತಾಂಡಾದ ಸರ್ಕಾರಿ ಶಾಲೆ ಶಿಕ್ಷಕನಾಗಿ ಕೆಲಸ ಮಾಡುತ್ತಿದ್ದ. ತನ್ನ ಕಾರಿನಲ್ಲಿ ಕ್ಷೀರ ಯೋಜನೆಯಲ್ಲಿ ನೀಡುತ್ತಿದ್ದ ಹಾಲಿನ ಪಾಕೆಟ್‌ಗಳನ್ನು ತೆಗೆದುಕೊಂಡು ಬಂದು ಯಾದಗಿರಿ ನಗರದ ಬಿವಿ ಸ್ವಾಮಿ ಕಿರಾಣಿ ಹಾಗೂ ಜನರಲ್ ಸ್ಟೋರ್ ಅಂಗಡಿಗೆ ಮಾರಾಟ ಮಾಡುತ್ತಿದ್ದ ಎಂಬ ಆರೋಪ ಕೇಳಿ ಬಂದಿದೆ.

ಹಲವು ವರ್ಷಗಳಿಂದ ಈ ರೀತಿ ಮಾರಾಟ ಅಕ್ರಮವಾಗಿ ಮಾಡುತ್ತಿದ್ದ. ಘಟನೆಯ ಹಿನ್ನೆಲೆಯಲ್ಲಿ ಹಾಲಿನ ಪೌಡರ್ ಮಾರಾಟ ಮಾಡುವ ವಿಡಿಯೋ ಬಹಿರಂಗವಾಗಿದೆ. ಈ ಸಂಬಂಧ ಇಲಾಖೆಯು ಕ್ರಮ ಕೈಗೊಂಡಿದ್ದು ಸೂರ್ಯಕಾಂತ್ ಅವರನ್ನು ಅಮಾನತು ಮಾಡಲು ಯಾದಗಿರಿ ಡಿಡಿಪಿಐ ಮಂಜುನಾಥ್ ಆದೇಶಿಸಿದ್ದಾರೆ. ಅಷ್ಟೇ ಅಲ್ಲ, ಅಮಾನತು ಜೊತೆಗೆ ಕ್ರಿಮಿನಲ್ ಪ್ರಕರಣವನ್ನು ಪ್ರಕರಣ ಕೂಡ ದಾಖಲಿಸುವಂತೆ ಅಕ್ಷರ ದಾಸೋಹ ಯೋಜನಾಧಿಕಾರಿಗಳಿಗೆ ಸೂಚಿಸಿದ್ದಾರೆ.

# ಅಂಗಡಿಗೆ ಬೆಂಕಿ: ಅಪಾರ ನಷ್ಟ



ಬೆಳಗಾವಿ: ಇಲ್ಲಿನ ವಡಗಾವಿಯಲ್ಲಿರುವ ಗುಜರಿ ಅಂಗಡಿಗೆ ಕಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಲಕ್ಷಾಂತರ ರೂ. ಗುಜರಿ ವಸ್ತುಗಳು ಸುಟ್ಟು ಕರಕಲಾದ ಘಟನೆ ಡೋರ್ ಗಲ್ಲಿಯಲ್ಲಿ ಶುಕ್ರವಾರ ಬೆಳಗ್ಗೆ ನಡೆದಿದೆ.

ತಗಡು, ಕಬ್ಬಿಣ, ರದ್ದಿ ಪೇಪರ್, ವಾಹನಗಳ ಬಿಡಿ ಭಾಗ ಸೇರಿದಂತೆ ಇನ್ನಿತರ ಕಚ್ಚಾ ವಸ್ತುಗಳಿರುವ ಗುಜರಿ ಅಂಗಡಿಗೆ ಬೆಳಗ್ಗೆ 5.30ಕ್ಕೆ ಬೆಂಕಿ ತಗುಲಿತ್ತು.

ಕೂಡಲೇ ಅಗ್ನಿ ಶಾಮಕ ದಳದ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸಿದರು. ಈ ಕುರಿತು ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶೋಷಿತ ಸಮುದಾಯ ಮೇಲೆತ್ತಲು ಸರ್ಕಾರ ಬದ್ಧ: ಸಚಿವ ಸತೀಶ್ ಜಾರಕಿಹೊಳಿ



ದಾವಣಗೆರೆ: ಸಾವಿರಾರೂ ವರ್ಷಗಳಿಂದ ಅನ್ಯಾಯಕ್ಕೊಳಗಾದ ಶೋಷಿತ ಸಮುದಾಯವನ್ನು ಮೇಲೆತ್ತುವ ಕೆಲಸ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪ್ರಾಮಾಣಿಕವಾಗಿ ಮಾಡುತ್ತದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಹರಿಹರ ತಾಲೂಕಿನ ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಆವರಣದಲ್ಲಿ 6ನೇ ವರ್ಷದ ಮಹರ್ಷಿ ವಾಲ್ಮೀಕಿ ಜಾತ್ರಾ ಮಹೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ ಜನ ಜಾಗೃತಿ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಶೋಷಿತರು ಸೇರಿ ಎಲ್ಲಾ ಸಮುದಾಯಗಳ ಆಶೀರ್ವಾದದಿಂದ ಹೆಚ್ಚು ಸೀಟು ಗೆದ್ದು ಕಾಂಗ್ರೆಸ್ ಸರ್ಕಾರ ರಚಿಸಿ, ಅಧಿಕಾರ ನಡೆಸುತ್ತಿದ್ದು, ನಿಮ್ಮ ಸರ್ವ ರೀತಿಯ ಏಳ್ಗೆಗೆ ಶ್ರಮಿಸಿ ನಿಮ್ಮ ಋಣ ತೀರಿಸುತ್ತೇವೆಂದು ತಿಳಿಸಿದರು.

ವಾಲ್ಮೀಕಿ ಜಾತ್ರೆಯಿಂದ ಸಮಾಜದ ಜನರಲ್ಲಿ ಜಾಗೃತಿ ಮುಡುತ್ತಿದೆ. ಕಳೆದ 10 ವರ್ಷಗಳಿಂದ ಸರ್ಕಾರದಿಂದ ಹಕ್ಕು ಪಡೆಯಲು ವಾಲ್ಮೀಕಿ ಶ್ರೀಗಳ ನೇತೃತ್ವದಲ್ಲಿ ಹೋರಾಟ ನಡೆಸಿ ರಾಜಕೀಯ, ಸಾಮಾಜಿಕ, ಶೈಕ್ಷಣಿಕವಾಗಿ ಹಲವು ಹಕ್ಕುಗಳನ್ನು ಪಡೆಯುವಲ್ಲಿ ವಾಲ್ಮೀಕಿಸಮಾಜವು ಯಶ್ವಸಿಯಾಗಿದೆ ಎಂದರು.

ಎಸ್ಟಿ ಕಮಿಷನ್, ವಾಲ್ಮೀಕಿ ವಿವಿ ಸ್ಥಾಪನೆ, ಬ್ಯಾಕ್ ಲಾಕ್ ಹುದ್ದೆಗಳ ಭರ್ತಿ, ವಿಶ್ವ ವಿದ್ಯಾಲಯಗಳಿಗೆ ವಾಲ್ಮೀಕಿ ಮಹರ್ಷಿ ಹೆಸರು ಇಡಬೇಕೆಂಬ ಬೇಡಿಕೆಗಳು ಇವೆ. ಹಾಗೇ ಸಮಾಜದ ಇನ್ನು ಅನೇಕ ಅಭಿವೃದ್ಧಿ ಕೆಲಸಗಳು ಬಾಕಿ ಉಳಿದಿವೆ. ಎಸ್ಸಿ, ಎಸ್ಟಿ ಸಮಾಜಕ್ಕೆ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ಇಡಬೇಕಾಗಿದೆ. ಈ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ನಾನು ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಮಾಡುತ್ತೇನೆಂದರು.

ಸಿಎಂ ಸಿದ್ದರಾಮಯ್ಯನವರ ಹಿಂದಿನ ಅವಧಿಯಲ್ಲಿ ಎಸ್ಸಿ, ಎಸ್ಟಿ ಸಮುದಾಯಕ್ಕೆ ಕೆಐಡಿಬಿಯಲ್ಲಿ ಲ್ಯಾಂಡ್ ನೀಡಲು ಆರಂಭಿಸಿದ್ದರು. ಅದೇ ಕಾರಣಕ್ಕೆ ಎಸ್ಸಿ, ಎಸ್ಟಿ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯಮದಲ್ಲಿ ತೊಡಗಿ ಆರ್ಥಿಕವಾಗಿ ಸಭಲರಾಗಿದ್ದಾರೆ. ಈ ಬಾರಿಯೂ ಸಮಾಜದ ಪರ ಹೆಚ್ಚಿನ ಕೆಲಸಗಳಾಗಬೇಕು. ಕೆಎಸ್–ಎಪ್ ಸಿಯಲ್ಲಿಯೂ ಎಸ್ಸಿ, ಎಸ್ಟಿ ಸಮುದಾಯಕ್ಕೆ ಸಾಲ ಯಾವುದೇ ತೊಡಕುಗಳಿಲ್ಲದೇ ಸಾಲ ದೊರಕಲು ಅನುವು ಮಾಡಬೇಕೆಂದು ತಿಳಿಸಿದರು.

ಹಿಂದುಳಿದ ಸಮುದಾಯನ್ನು ಆರ್ಥಿಕವಾಗಿ ಮೇಲೆತ್ತಲು ಶ್ರಮಿಸಬೇಕಾಗಿದೆ. ಇನ್ನು ವಾಲ್ಮೀಕಿ ಪೀಠ ಸ್ಥಾಪಿಸಲು ಬೆಂಗಳೂರಿನ ದೇವನಹಳ್ಳಿಯಲ್ಲಿ ಸ್ಥಳವನ್ನು ನೀಡಬೇಕೆಂದು ಸಿಎಂ ಸಿದ್ದರಾಮಯ್ಯನವರಿಗೆ ವಾಲ್ಮೀಕಿ ಸ್ವಾಮೀಜಿಗಳು ಮನವಿ ಸಲ್ಲಿಸಿದ್ದಾರೆ. ಒಟ್ಟಾರೆ ಸಮುದಾಯದ ಶೈಕ್ಷಣಿಕ ಪ್ರಗತಿಗೆ ಸರ್ವರೂ ಶ್ರಮಿಸಬೇಕಿದೆ ಎಂದು ಹೇಳಿದರು.

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯ, ಸಚಿವರಾದ ಡಾ. ಜಿ. ಪರಮೇಶ್ವರ್, ಕೆ.ಎನ್. ರಾಜಣ್ಣ, ಎಸ್ .ಎಸ್. ಮಲ್ಲಿಕಾರ್ಜುನ್, ಬಿ. ನಾಗೇಂದ್ರ ಸೇರಿದಂತೆ ಶಾಸಕರು, ಸಮಾಜದ ಮುಖಂಡರು, ವಾಲ್ಮೀಕಿ ಸಮಾಜದ ಅಪಾರ ಸಂಖ್ಯೆಯ ಜನ ಪಾಲ್ಗೊಂಡಿದ್ದರು.

# ಸಾರ್ವಜನಿಕ ಜಾಗೆ ಅತಿಕ್ರಮಣ ತೆರವಿಗೆ ಒತ್ತಾಯ



ಹುಕ್ಕೇರಿ: ಪಟ್ಟಣದ ಪ್ರಮುಖ ಸಾರ್ವಜನಿಕ ಖುಲ್ಲಾ ಜಾಗೆಯನ್ನು ಅತಿಕ್ರಮಣ ಮಾಡಿಕೊಂಡಿರುವುದನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿ ವಿವಿಧ ಸಮಾಜದ ನೂರಾರು ಜನರು ಗುರುವಾರ ಪ್ರತಿಭಟನೆ ನಡೆಸಿದರು.

ಇಲ್ಲಿನ ಮಿನಿವಿಧಾನ ಸೌಧ ಬಳಿ ಜಮಾಯಿಸಿದ ವಿವಿಧ ಸಮಾಜದ ಯುವ ಮುಖಂಡರು, ಒತ್ತುವರಿ ಜಾಗೆಯನ್ನು ತೆರವುಗೊಳಿಸಲು ಹಿಂದೇಟು ಹಾಕಿದರೆ ತಹಸೀಲದಾರ ಕಚೇರಿ ಹಾಗೂ ಪುರಸಭೆ ಕಾರ್ಯಾಲಯ ಎದುರು ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಸಿದರು.

ಹುಕ್ಕೇರಿ ಪಟ್ಟಣದ ಬಜಾರ್ ರಸ್ತೆಯಿಂದ ಚಕ್ಕರ ಲೈನ್ ರಸ್ತೆ, ಗುಗ್ಗಳ ಭಾವಿ, ಬಸವೇಶ್ವರ ದೇವಸ್ಥಾನ, ಪಟ್ಟಣಶೆಟ್ಟಿ ಚಾಳ್ ಸಂಪರ್ಕ ಕಲ್ಪಿಸುವ ಸಾರ್ವಜನಿಕ ರಸ್ತೆ ಹಾಗೂ ಸಾರ್ವಜನಿಕ ಖುಲ್ಲಾ ಜಾಗೆಯನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ. ಈ ಕುರಿತು ಹಲವು ಬಾರಿ ಸಂಬಂಧಿಸಿದವರಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ ಸಾರ್ವಜನಿಕ ಖುಲ್ಲಾ ಜಾಗೆ ಕಬಳಿಸಲು ಅಂಕಲಿ ಕುಟುಂಬ ಅಧಿಕಾರಿಗಳ ಮೇಲೆ ಒತ್ತಡ ಹಾಕಿ ತಮ್ಮ ಹೆಸರಿನಲ್ಲಿ ಪರಭಾರೆ ಮಾಡಲು ಹೊಂಚು ಹಾಕಿದೆ. ಅಣ್ಣಾಜಿ ಧನಾಜಿ ಅಂಕಲೆ ಹಾಗೂ ಅವರ ಮಕ್ಕಳಾದ ರಾಹುಲ ಮತ್ತು ರಾಜು ಅಂಕಲೆ ಎಂಬುವರು ಈ ಸಾರ್ವಜನಿಕ ಜಾಗೆಯನ್ನು ಅತಿಕ್ರಮಣ ಮಾಡಿಕೊಂಡಿದ್ದು ಈ ಕುರಿತು ಪ್ರಶ್ನಿಸಿದರೆ ದಬ್ಬಾಳಿಕೆ, ಗೂಂಡಾವರ್ತನೆ ತೋರುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಪಾದಿಸಿದರು.

ಈಗಾಗಲೇ ಡಿಡಿಎಲ್ಆರ್ ಮೂಲಕ ಖಾಲಿ ಜಾಗೆಯ ಕೆಲ ಭಾಗವನ್ನು ಅಂಕಲಿ ಕುಟುಂಬ ತಮ್ಮ ಹೆಸರಿನಲ್ಲಿ ವರ್ಗಾವಣೆ ಮಾಡಿಕೊಂಡಿದೆ ಎಂಬ ಮಾಹಿತಿಯಿದೆ. ಸಾರ್ವಜನಿಕ ಖುಲ್ಲಾ ಜಾಗೆಯ ಅತಿಕ್ರಮಣ ತೆರವುಗೊಳಿಸಿ ಈ ಜಾಗೆಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಬಳಿಕ ಪುರಸಭೆ ಮುಖ್ಯಾಧಿಕಾರಿಗಳಿಗೂ ತಮ್ಮ ಬೇಡಿಕೆಯ ಮನವಿ ಸಲ್ಲಿಸಿದರು.

ಪುರಸಭೆ ಮಾಜಿ ಉಪಾಧ್ಯಕ್ಷ ಆನಂದ ಗಂಧ, ಸದಸ್ಯ ಚಂದು ಮುತ್ನಾಳೆ, ಮಾಜಿ ಸದಸ್ಯ ಬಸವೇಶ ಪಟ್ಟಣಶೆಟ್ಟಿ, ಮುಖಂಡರಾದ ಅಪ್ಪುಶ ತುಬಚಿ, ಸುಹಾಸ ನೂಲಿ, ಶಿವರಾಜ ನಾಯಿಕ, ರಮೇಶ ಬೋಳಗಾಂವಿ, ಬಸವರಾಜ ನಾಯಿಕ, ಜಾವೇದ ನದಾಫ್, ಸುಭಾಶ ನಾಯಿಕ, ಜ್ಯೋತಿಬಾ ದುಪ್ಪಟ್ಟಿ, ಶಿವಾನಂದ ಪೂಜೇರಿ, ಸಲೀಮ್ ನದಾಫ್, ಮೋಯಿನ್ ನದಾಫ್, ಸೈಯದ ಮೋಮಿನ, ಚಿದಾನಂದ ಬಸ್ತವಾಡೆ, ಅಲ್ಲಾವುದ್ದೀನ್ ಗಳತಗಿ, ಶಿವರಾಜ ಜಂಗ್ಲಿ ಮತ್ತಿತರರು ಉಪಸ್ಥಿತರಿದ್ದರು.

# ಅಪ್ರಾಪ್ತ ವಿದ್ಯಾರ್ಥಿಯೊಂದಿಗೆ ಚೆಲ್ಲಾಟ; ಶಿಕ್ಷಕಿಗೆ 50 ವರ್ಷ ಶಿಕ್ಷೆ



ನವದೆಹಲಿ: ವಿವಾಹಿತ ಶಿಕ್ಷಕಿಯೊಬ್ಬರು ಅಪ್ರಾಪ್ತ ವಯಸ್ಕ ವಿದ್ಯಾರ್ಥಿಗೆ ಲೈಂಗಿಕ ಕಿರುಕುಳ ನೀಡಿದಕ್ಕಾಗಿ ನ್ಯಾಯಾಲಯ ಆಕೆಗೆ 50 ವರ್ಷಗಳ ಶಿಕ್ಷೆ ವಿಧಿಸಿರುವ ಘಟನೆ ವರ್ಜಿನಿಯಾದಲ್ಲಿ ನಡೆದಿದೆ. ಹೆನ್ರಿಕೊ ಕೌಂಟಿಯ ಹಂಗೇರಿ ಕ್ರೀಕ್ ಮಿಡಲ್ ಸ್ಕೂಲ್‌ನ ಶಿಕ್ಷಕಿ ಮೇಗನ್ ಪಾಲಿನ್ ಜೋರ್ಡಾನ್ (25), 50 ವರ್ಷ ಶಿಕ್ಷೆಗೆ ಗುರಿಯಾಗಿರುವ ಶಿಕ್ಷಕಿ ಎಂದು ತಿಳಿದು ಬಂದಿದೆ. 2022–2023ರ ಅವಧಿಯಲ್ಲಿ ಜೋರ್ಡಾನ್ ಮಾಧ್ಯಮಿಕ ಶಾಲೆಯಲ್ಲಿ ಕೆಲಸ ಮಾಡುತ್ತಿದ್ದ ಪಾಲಿನ್ ಜೋರ್ಡಾನ್ ಅದೇ ಶಾಲೆಯ ಅಪ್ರಾಪ್ತ ವಯಸ್ಯ ವಿದ್ಯಾರ್ಥಿಯೊಂದಿಗೆ ಸಂಬಂಧ ಹೊಂದಿದ್ದಳು. ಆಗಿಂದಾಗೆ ವಿದ್ಯಾರ್ಥಿಯ ಮನೆಗೆ ಹೋಗಿ ಈಕೆ ಲೈಂಗಿಕ ಕ್ರಿಯೆಯನ್ನು ಸಹ ನಡೆಸುತ್ತಿದ್ದಳು. ಈಕೆಯ ಕಾಟ ತಾಳಲಾರದೆ ವಿದ್ಯಾರ್ಥಿ ನಡೆದ ಬಗ್ಗೆ ತನ್ನ ಪೋಷಕರ ಬಳಿ ಹೇಳಿಕೊಂಡಿದ್ದು, ದೂರು ದಾಖಲಿಸಿದ್ದಾರೆ.

ವಿದ್ಯಾರ್ಥಿಯ ಪೋಷಕರು ನೀಡಿದ ದೂರಿನನ್ವಯ ತನಿಖೆ ನಡೆಸಿದ ಪೊಲೀಸರು ಪತ್ತೆಯಾದ ಸಾಕ್ಷ್ಯಾಧಾರಗಳ್ನು ಆಧಾರವಾಗಿಟ್ಟುಕೊಂಡು ಶಿಕ್ಷಕಿಯನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದ್ದರು. ವಿಚಾರಣೆ ವೇಳೆ ಆಕೆ ನಡೆದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದು, ತಪ್ಪೊಪ್ಪಿಕೊಂಡಿದ್ದಾಳೆ. ಬಳಿಕ ಸ್ಥಳೀಯ ಕೋರ್ಟ್ ವರ್ಜೀನಿಯಾ ಕೋಡ್ ಅಡಿಯಲ್ಲಿ, 17 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಲೈಂಗಿಕ ಚಟುವಟಿಕೆಗೆ ಕಾನೂನು ಬದ್ಧವಾಗಿ ಅನುಮತಿ ನೀಡಲು ಸಾಧ್ಯವಿಲ್ಲ ಎಂಬುದನ್ನು ಗಮನಿಸಿದ ನ್ಯಾಯಾಧೀಶರು ಶಿಕ್ಷಕಿಗೆ 50 ವರ್ಷಗಳ ಶಿಕ್ಷೆಯನ್ನು ವಿಧಿಸಿದ್ದಾರೆ.

# ಕೆಲಸ ಕೊಟ್ಟ ಮಾಲೀಕನ ಮನೆಯಲ್ಲಿ ಚಿನ್ನಾಭರಣ ದೋಚಿದ್ದ ಆರೋಪಿ ಅಂದರ್




ಬೆಳಗಾವಿ: ವಯೋವೃದ್ದರ ಆರೈಕೆಗಾಗಿ ಹೋಮ್ ನರ್ಸಿಂಗ್ ಕೆಲಸ ಮಾಡುತ್ತ ಅನ್ನ ನೀಡುತ್ತಿದ್ದ ಮಾಲಿಕರ ಮನೆಯಲ್ಲಿನ ವಜ್ರ ಮತ್ತು ಚಿನ್ನಾಭರಣವನ್ನು ದೋಚಿ ಪರಾರಿಯಾಗಿದ್ದ ಮಹಿಳೆಯನ್ನು ಬಂಧಿಸಿರುವ ಬೆಳಗಾವಿಯ ಕ್ಯಾಂಪ್ ಪೊಲೀಸರು ಬಂಧಿತ ಮಹಿಳೆಯಿಂದ 12.31 ಲಕ್ಷ ಮೌಲ್ಯದ ವಜ್ರ ಮತ್ತು ಚಿನ್ನಾಭರಣ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಶ್ರೀದೇವಿ ಪ್ರಕಾಶ ಮಾಳಗಿ (ಉದ್ಯೋಗ:ಹೋಮ್ ನರ್ಸಿಂಗ್) ಸಾ : ಸುಲದಾಳ, ಹಾಲಿ:ಕಾಕತಿ ಬಂಧಿತ ಆರೋಪಿತಳಾಗಿದ್ದಾರೆ. ಬಂಧಿತಳು ಬೆಳಗಾವಿಯ ಕ್ಯಾಂಪ್ ಪ್ರದೇಶದ ರುಕ್ಸಾನಾ ಜಾಲ ನಾಂಜಿ ಎನ್ನುವವರ ಮನೆಯಲ್ಲಿ ಕಳೆದ ಒಂದು ತಿಂಗಳಿನಿಂದ ವಯೋವೃದ್ದರಾಗಿರುವ ತಾಯಿಯ (ಹೋಮ್ ನರ್ಸಿಂಗ್) ಆರೈಕೆ ಮಾಡುವ ಕೆಲಸ ನಿರ್ವಹಿಸುತ್ತಿದ್ದಳು.

ಆದರೆ ಜನೆವರಿ ದಿ. 5ರಂದು ಸದರಿ ಕೆಲಸದಾಕೆ ಸುಮಾರು 12,31,000 ರೂ ಕಿಮ್ಮತ್ತಿನ ಬಂಗಾರದ ಹಾಗೂ ವಜ್ರದ ಮತ್ತು ಬೆಳ್ಳಿಯ ಆಭರಣಗಳನ್ನು ಕಳ್ಳತನ ಮಾಡಿಕೊಂಡು ಹೋಗಿರುವ ಸಂಶಯ ಇದೆ ಎಂದು ಮನೆಯ ಮಾಲಿಕರು ನಗರದ ಕ್ಯಾಂಪ್ ಪೊಲೀಸರಿಗೆ ದೂರು ನೀಡಿದ್ದರು. ಮನೆಯ ಮಾಲಿಕರು ನೀಡಿದ ದೂರಿನನ್ವಯ ಕ್ಯಾಂಪ್ ಪೊಲೀಸ್ ಠಾಣೆ ಅಪರಾಧ ಸಂಖ್ಯೆ.15/2024 ಕಲಂ. 381 ಐಪಿಸಿ ಪ್ರಕಾರ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಳ್ಳಲಾಗಿತ್ತು.

ಪೊಲೀಸ ಆಯುಕ್ತರ ಹಾಗೂ ಉಪ ಪೊಲೀಸ ಆಯುಕ್ತರ ಮಾರ್ಗದರ್ಶನದಂತೆ ಕ್ಯಾಂಪ್ ಪೊಲೀಸ ಠಾಣೆಯ ಇನ್ಸಪೆಕ್ಟರ್ ಅಲ್ತಾಪ್, ಎಮ್ ಹಾಗೂ ಅವರ ಸಿಬ್ಬಂದಿಯವರು ಆರೋಪಿತಳಾದ ಶ್ರೀದೇವಿ ಪ್ರಕಾಶ ಮಾಳಗಿ ಇವಳನ್ನು ಫೆ. ದಿ. 6ರಂದು ವಶಕ್ಕೆ ಪಡೆದುಕೊಂಡು ತಮ್ಮದೇಯಾದ ರೀತಿಯಲ್ಲಿ ವಿಚಾರಣೆ ಮಾಡಿದಾಗ ಬಂಧಿತಳು ಕೆಲಸಕ್ಕೆ ಇದ್ದ ಮನೆಯಲ್ಲಿ ಕಳ್ಳತನ ಮಾಡಿದ ಬಗ್ಗೆ ಒಪ್ಪಿಕೊಂಡಿದ್ದಾಳೆ. ಬಳಿಕ ಬಂಧಿತಳಿಂದ 175 ಗ್ರಾಂ ಬಂಗಾರದ ಆಭರಣಗಳು ಹಾಗೂ 50 ಗ್ರಾಂ ಬೆಳ್ಳಿಯ ಆಭರಣ ಹೀಗೆ ಒಟ್ಟು 12,31,000 ರೂಪಾಯಿ ಮೌಲ್ಯದ ಕಳ್ಳತನ ಮಾಡಿದ್ದ ಸಾಮಗ್ರಿಗಳನ್ನು ವಶಪಡಿಕೊಂಡಿದ್ದಾರೆ.

ಆರೋಪಿತಳನ್ನು ವಶಕ್ಕೆ ಪಡೆದು ಆಭರಣಗಳನ್ನು ಜಪ್ತಪಡಿಸಿಕೊಂಡ ಕ್ಯಾಂಪ್ ಪಿಐ ಅಲ್ತಾಪ ಮುಲ್ಲಾ ಹಾಗೂ ತಂಡದ ಕಾರ್ಯವನ್ನು ಬೆಳಗಾವಿ ನಗರ ಪೊಲೀಸ್ ಆಯುಕ್ತ ಎಸ್. ಎನ್. ಸಿದ್ದರಾಮಪ್ಪ ಅವರು ಶ್ಲಾಘಿಸಿ, ತಂಡಕ್ಕೆ ರೂ.10 ಸಾವಿರ ಬಹುಮಾನವನ್ನು ಘೋಷಿಸಿದ್ದಾರೆ.

# ಶಿಕ್ಷಕಿ ಜತೆ ಶಿಕ್ಷಕ ಪ್ರೇಮಾಂಕುರ: ಪತಿಯನ್ನು ರೆಡ್ ಹ್ಯಾಂಡ್ ಹಿಡಿದ ಪತ್ನಿ



ತುಮಕೂರು: ಒಂದೇ ಶಾಲೆಯ ಶಿಕ್ಷಕ ಹಾಗೂ ಶಿಕ್ಷಕಿಯ ನಡುವೆ ಲವ್ವಿ–ಡವ್ವಿ ನಡೆದು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುವ ಘಟನೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದಸೂಡಿ ಗ್ರಾಮದಲ್ಲಿ ನಡೆದಿದೆ. ಹೆಂಡತಿ ಇಲ್ಲದಿದ್ದಾಗ ಸಹ ಶಿಕ್ಷಕಿಯನ್ನ ಮನೆಗೆ ಕರೆಸಿಕೊಂಡು ಶಿಕ್ಷಕ ರಂಗನಾಥ್ ತಗಲಾಕಿಕೊಂಡಿದ್ದಾನೆ.

ಗಂಡ, ಸಹ–ಶಿಕ್ಷಕಿಯನ್ನು ಮನೆಗೆ ಕರೆದುಕೊಂಡು ಬಂದ ವಿಚಾರ ತಿಳಿದ ರಂಗನಾಥ್ ಪತ್ನಿ ಚಂದ್ರಮ್ಮ ರಾತ್ರೋರಾತ್ರಿ ಮನೆಗೆ ಬಂದು ಗಲಾಟೆ ಮಾಡಿದ್ದಾರೆ. ಗಂಡನ ಜೊತೆಯಲ್ಲಿದ್ದ ಶಿಕ್ಷಕಿಗೆ ಹಿಗ್ಗಾಮುಗ್ಗ ವಾಗ್ದಾಳಿ ನಡೆಸಿದ ಚಂದ್ರಮ್ಮ, ನನ್ನ ಹಾಗೂ ನನ್ನ ಮಕ್ಕಳನ್ನು ನನ್ನ ಪತಿ ಬೀದಿಗೆ ತಳ್ಳಿದ್ದಾರೆ. ಅಕ್ರಮ ಸಂಬಂಧ ನಡೆಸುತ್ತಿದ್ದಾರೆಂದು ಆರೋಪಿಸಿದ್ದಾರೆ.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದಸೂಡಿ ಬಳಿಯ ಎಂ.ಕೆ ಹಟ್ಟಿ ಪ್ರಾಥಮಿಕ ಸರ್ಕಾರಿ ಶಾಲೆಯಲ್ಲಿ ರಂಗನಾಥ್ ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈತನ ವಿರುದ್ಧವೂ ಶಿಕ್ಷಣ ಇಲಾಖೆ ಸರಿಯಾದ ಕ್ರಮ ತೆಗೆದುಕೊಳ್ಳಬೇಕೆಂದು ಪತ್ನಿ ಚಂದ್ರಮ್ಮ ಆಗ್ರಹಿಸಿದ್ದಾರೆ.

# ಕಿಟಕಿ ವಿಚಾರಕ್ಕೆ ಜಡೆ ಜಗಳ

ಬೆಂಗಳೂರು: ಬಸ್ನ ಕಿಟಕಿ ವಿಚಾರಕ್ಕೆ ಇಬ್ಬರು ಮಹಿಳಾ ಪ್ರಯಾಣಿಕರ ನಡುವೆ ಜಗಳ ನಡೆದು, ಒಬ್ಬರಿಗೊಬ್ಬರು ಚಪ್ಪಲಿಯಲ್ಲಿ ಹೊಡೆದಾಡಿಕೊಂಡ ಘಟನೆ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ನಡೆದಿದೆ. ಮೆಜೆಸ್ಟಿಕ್ನಿಂದ ಪೀಣ್ಯಕ್ಕೆ ಹೊರಟಿದ್ದ ಕೆಎ 57 ಎಫ್ 4255 ನಂಬರ್‌ನ ಬಿಎಂಟಿಸಿ ಬಸ್ನಲ್ಲಿಈ ಘಟನೆ ನಡೆದಿದೆ. ಮುಂದಿನ ಸೀಟ್ನಲ್ಲಿ ಕುಳಿತಿದ್ದ ಮಹಿಳೆ ಹಾಗೂ ಹಿಂದಿನ ಸೀಟ್ನಲ್ಲಿ ಕುಳಿತ ಮಹಿಳೆಯ ನಡುವೆ ಬಸ್ನ ಕಿಟಕಿ ವಿಚಾರಕ್ಕೆ ಗಲಾಟೆ ನಡೆದಿದೆ. ಜಗಳ ತಾರಕಕ್ಕೇರಿ ಮುಂದೆ ಕುಳಿತಿದ್ದ ಮಹಿಳೆಯು ಏಕಾಏಕಿಯಾಗಿ ಚಪ್ಪಲಿಯಿಂದ ಹಲ್ಲೆ ನಡೆಸಿದ್ದಾಳೆ. ಬಳಿಕ ಇಬ್ಬರೂ ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಈ ವೇಳೆ ಬಸ್ನಲ್ಲಿದ್ದ ಜನ ಮುಂದಿನ ಸೀಟ್ನಲ್ಲಿದ್ದ ಮಹಿಳೆಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

# ಸರ್ಕಾರಿ ಕಚೇರಿಯಲ್ಲಿ ಆ್ಯಸಿಡ್ ಕುಡಿದು ಆತ್ಮಹತ್ಯೆಗೆ ಯತ್ನಿಸಿದ ಅಧಿಕಾರಿ




ರಾಯಚೂರು: ಸರ್ಕಾರಿ ಅಧಿಕಾರಿಯೊಬ್ಬರು ಆ್ಯಸಿಡ್ ಕುಡಿದು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ನಗರದ ಪಬ್ಲಿಕ್ ಸ್ವಿಮ್ಮಿಂಗ್ ಪೂಲ್ ಬಳಿ ನಡೆದಿದೆ.

ರಾಯಚೂರಿನ ಉಪವಿಭಾಗ (ಎಸಿ) ಕಚೇರಿಯ ಅಧಿಕಾರಿ ವಸೀಮ್ (45) ಆತ್ಮಹತ್ಯೆಗೆ ಯತ್ನಿಸಿದ ಸಿಬ್ಬಂದಿ. ಆ್ಯಸಿಡ್ ಕುಡಿದ ಅಧಿಕಾರಿಯನ್ನು ನೋಡಿದ ಅಲ್ಲಿದ್ದವರು ತಕ್ಷಣ ಅವರನ್ನು ನಗರದ ಸಂಕಲ್ಪ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ. ಆದರೆ ಇನ್ನು ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದಿದ್ದರಿಂದ ಅಧಿಕಾರಿಯನ್ನು ಹೈದರಾಬಾದ್ನಲ್ಲಿನ ಆಸ್ಪತ್ರೆಯೊಂದಕ್ಕೆ ಕರೆದುಕೊಂಡು ಹೋಗಿದ್ದು ಅಲ್ಲಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಇನ್ನು ಅಧಿಕಾರಿ ಆ್ಯಸಿಡ್ ಏಕೆ ಸೇವನೆ ಮಾಡಿದರು ಎಂಬುದರ ಬಗ್ಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ. ಆ್ಯಸಿಡ್ ಸೇವನೆಯಿಂದಾಗಿ ವಸೀಮ್ ತೀವ್ರವಾಗಿ ಅಸ್ವಸ್ಥಗೊಂಡಿದ್ದಾರೆ ಎಂದು ಅವರ ಕುಟುಂಬಸ್ಥರು ನ್ಯೂಸ್ಫಸ್ಟ್ಗೆ ಮಾಹಿತಿ ನೀಡಿದ್ದಾರೆ.

# ವಿದ್ಯಾರ್ಥಿಗಳು ಅಧ್ಯಯನ ಶೀಲರಾಗಬೇಕು: ಲವಕುಮಾರ್




ಶಿಂದಿಕುರಬೇಟ: ನಮ್ಮ ಪ್ರೌಢಶಾಲೆಯಲ್ಲಿ ಧರ್ಮಸ್ಥಳದ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ನಮ್ಮ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಟ್ಯೂಷನ್ ಕ್ಲಾಸೆಸ್ ಉದ್ಘಾಟನಾ ಕಾರ್ಯಕ್ರಮವನ್ನು ನೆರವೇರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ನಿರ್ದೇಶಕರಾದ ಲವಕುಮಾರ್ ವಿದ್ಯಾರ್ಥಿಗಳು ಓದುವುದರೊಂದಿಗೆ ಸಂಪೂರ್ಣವಾಗಿ ಅಧ್ಯಯನಶೀಲರಾಗಬೇಕು ಅಂದಾಗ ನಾವು ಸಾಧಕರಾಗುತ್ತೇವೆ ಎಂದು ತಿಳಿಸಿದರು. ಮುಖ್ಯೋಪಾಧ್ಯಾಯರಾದ. ಪಿ ಎಚ್ ಗೋಸಬಾಳ ವಿದ್ಯಾರ್ಥಿಗಳು ಈ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಪೂರ್ಣ ಲಾಭವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು. ತಾಲುಕಾ ಯೋಜನಾಧಿಕಾರಿಗಳಾದ ಮಮತಾ ನಾಯ್ಕ್ ಮಾಧ್ಯಮಿಕ ಶಾಲೆಯ ಎಸ್ ಡಿ ಸಿ ಎಂ ಸಿ ಅಧ್ಯಕ್ಷರಾದ ಜ್ಯೋತೆಪ್ಪ ಬಂತಿ, ಶಿಕ್ಷಕರಾದ ಎಂ ಎಸ್ ಬೆಳಗಲಿ ಮೇಲ್ವಿಚಾರಕರಾದ ಕವಿತಾ ಮೇಡಂ, ಸೇವಾ ಪ್ರತಿನಿಧಿಯಾದ ರೂಪಶ್ರೀ ಮೇಡಂ, ಹಾಗೂ ಶಾಲಾ ಸಿಬ್ಬಂದಿಯವರು ಉಪಸ್ಥಿತರಿದ್ದರು. ಪಿ ಎಲ್ ಮಲ್ಲಾಪುರ್ ನಿರೂಪಿಸಿದರು ಪಾಟೀಲ್ ಮೇಡಂ ವಂದಿಸಿದರು.

# ಬೆಳವಡಿ ಉತ್ಸವ: ಪೂರ್ವಭಾವಿ ಸಭೆ; ಫೆ.28 ರಿಂದ ಬೆಳವಡಿ ಮಲ್ಲಮ್ಮ ಉತ್ಸವ

ಬೆಳಗಾವಿ: ಪ್ರತಿವರ್ಷದಂತೆ ಫೆ.28 ಹಾಗೂ 29 ರಂದು ವೀರವನಿತೆ ಬೆಳವಡಿ ಮಲ್ಲಮ್ಮ ಉತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಬೈಲಹೊಂಗಲ ಶಾಸಕರಾದ ಮಹಾಂತೇಶ್ ಕೌಜಲಗಿ ಹೇಳಿದರು.

ಬೆಳವಡಿ ಗ್ರಾಮದ ಬೆಳವಡಿ ಮಲ್ಲಮ್ಮ ಸ್ಮಾರಕ ಭವನದಲ್ಲಿ ಶುಕ್ರವಾರ(ಫೆ.9) ನಡೆದ ಬೆಳವಡಿ ಮಲ್ಲಮ್ಮ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಬಾರಿ ಸಿಡಿಮದ್ದು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಇದರೊಂದಿಗೆ ವಸ್ತು ಪ್ರದರ್ಶನವನ್ನು ಆಯೋಜಿಸಲಾಗುವುದು. ಉತ್ಸವದ ಯಶಸ್ವಿಯಾಗಿ ಆಯೋಜಿಸಲು ಗ್ರಾಮದ ಪ್ರತಿಯೊಬ್ಬರು ಭಾಗವಹಿಸಬೇಕು. ಪರಸ್ಪರ ಸಹಕರಿಸುವ ಮೂಲಕ ಮಲ್ಲಮ್ಮಳ ಉತ್ಸವವನ್ನು ಅದ್ದೂರಿಯಾಗಿ ಆಚರಿಸೋಣ ಎಂದು ಕರೆ ನೀಡಿದರು.

**ಪಠ್ಯಪುಸ್ತಕದಲ್ಲಿ ಮಲ್ಲಮ್ಮಳ ಸಾಹಸಗಾಥೆ:**

ಪಠ್ಯಪುಸ್ತಕಗಳಲ್ಲಿ ಬೆಳವಡಿ ಮಲ್ಲಮ್ಮನ ಸಾಹಸಗಾಥೆ ಸೇರ್ಪಡೆಗೊಳಿಸುವಂತೆ ಸರಕಾರವನ್ನು ಒತ್ತಾಯಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಕೂಡ ಸಲ್ಲಿಸಲಾಗಿದ್ದು, ಪಠ್ಯಪುಸ್ತಕಗಳ ಪರಿಷ್ಕರಣೆ ವೇಳೆ ಮಲ್ಲಮ್ಮಳ ಕುರಿತು ಪಾಠ ಸೇರ್ಪಡೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಶಾಸಕ ಮಹಾಂತೇಶ ಕೌಜಲಗಿ ಭರವಸೆ ನೀಡಿದರು.

ಇದಕ್ಕೂ ಮುಂಚೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, "ಬೆಳವಡಿ ಮಲ್ಲಮ್ಮ ಉತ್ಸವವನ್ನು ಈ ಬಾರಿ ಅತ್ಯಂತ ಅದ್ದೂರಿಯಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲಾಗುವುದು. ಶಾಸಕರ ಮುತುವರ್ಜಿಯಿಜದಾಗಿ ಈ ವರ್ಷ ಅತೀ ಹೆಚ್ಚು ಅನುದಾನವನ್ನು ಬಿಡುಗಡೆಯಾಗಿದೆ. ಮುಂಚೆಯಂತೆ ಸಿಡಿಮದ್ದು ಕಾರ್ಯಕ್ರಮ ಆಚರಿಸಲಾಗುವುದು" ಎಂದು ತಿಳಿಸಿದರು.

ಸಾರ್ವಜನಿಕರ ಅಪೇಕ್ಷೆಯಂತೆ ಶಾಶ್ವತ ಜಾಗೆ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಇದಲ್ಲದೇ ಬೆಳವಡಿ ಮಲ್ಲಮ್ಮನ ಪುತ್ಥಳಿಗೆ ಮಾಲಾರ್ಪಣೆಗೆ ಅನುಕೂಲವಾಗುವಂತೆ ಲಿಫ್ಟ್ ವ್ಯವಸ್ಥೆ ಕಲ್ಪಿಸಲಾಗುವುದು. ರಾಜ್ಯಮಟ್ಟದ ಹಾಗೂ ಸ್ಥಳೀಯವಾಗಿರುವ ಅತ್ಯುತ್ತಮ ಕಲಾತಂಡಗಳನ್ನು ಆಹ್ವಾನಿಸಿ ಅರ್ಥಪೂರ್ಣ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಅನುಕೂಲವಾಗುವಂತೆ ಸ್ವಾಗತ, ಪ್ರಚಾರ, ವಸತಿ, ಜ್ಯೋತಿ ಉಪ ಸಮಿತಿ, ಊಟೋಪಹಾರ ಉಪ ಸಮಿತಿ, ವೇದಿಕೆ ಇಪ ಸಮಿತಿ, ಮೆರವಣಿಗೆ, ಸಾಂಸ್ಕೃತಿಕ, ಕ್ರೀಡೆ, ವಸ್ತು ಪ್ರದರ್ಶನ, ಸಾರಿಗೆ, ವಿಚಾರ ಸಂಕೀರಣ ಉಪ ಸಮಿತಿಗಳನ್ನು ಕೂಡ ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.




**ವೀರಜ್ಯೋತಿ ಯಾತ್ರೆ ಫೆ.26 ರಂದು ಆರಂಭ:**

ವೀರವನಿತೆ ಬೆಳವಡಿ ಮಲ್ಲಮ್ಮನ ಹುಟ್ಟೂರಾಗಿರುವ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಸೋಂದೆಯಿಂದ ವೀರಜ್ಯೋತಿಯು ಫೆ.26 ರಂದು ಸಂಚಾರವನ್ನು ಆರಂಭಿಸಲಿದೆ.

ಪ್ರಮುಖ ಪಟ್ಟಣಗಳಲ್ಲಿ ಸಂಚರಿಸಿ ಫೆ.28 ರಂದು ಬೆಳಿಗ್ಗೆ 10 ಗಂಟೆಗೆ ಜ್ಯೋತಿ ಆಗಮಿಸಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹೇಳಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಚಂದ್ರಶೇಖರಯ್ಯ ಕಾರಿಮನಿ ಮಾತನಾಡಿ, ಈ ಬಾರಿ ಉತ್ಸವಕ್ಕೆ ಅತೀ ಹೆಚ್ಚು ಅನುದಾನ ಬಿಡುಗಡೆಯಾಗಿರುವುದು ಸಂತಸಕರ. ಮುಂದಿನ ವರ್ಷದವರೆಗೆ ಉತ್ಸವದ ಆಚರಣೆಗೆ ಶಾಶ್ವತ ಜಾಗೆಯನ್ನು ಹೊಂದಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಗ್ರಾಮದ ಪ್ರತಿಯೊಬ್ಬರು ಉತ್ಸಾಹದಿಂದ ಭಾಹವಹಿಸುವ ಮೂಲಕ ಉತ್ಸವವನ್ನು ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಮನವಿ ಮಾಡಿಕೊಂಡರು.

**ಸಾರ್ವಜನಿಕರ ಸಲಹೆಗಳು:**

ವರ್ಷಕ್ಕೊಮ್ಮೆ ಉತ್ಸವ ನಡೆಯುದರಿಂದ ಅದ್ದೂರಿ ಮೆರವಣಿಗೆ ನಡೆಸಬೇಕು; ಸಮರ್ಪಕ ಆಸನ ವ್ಯವಸ್ಥೆ ಕಲ್ಪಿಸಬೇಕು; ವಿಜಯದ ಸಂಕೇತವಾಗಿ ಮುಂಚೆಯಂತೆ ಸಿಡಿಮದ್ದು ಕಾರ್ಯಕ್ರಮ ನಡೆಸಬೇಕು; ಮಲ್ಲಮ್ಮನ ಇತಿಹಾಸದ ಮೇಲೆ ಬೆಳಕು ಚೆಲ್ಲುವ ಕಾರ್ಯಕ್ರಮಗಳಿಗೆ ಆದ್ಯತೆ ನೀಡಬೇಕು; ಉತ್ಸವದ ಅನುದಾನದಲ್ಲಿ ಉಳಿತಾಯ ಮಾಡಿ ಪ್ರತಿವರ್ಷ ಉತ್ಸವ ಆಚರಣೆಗೆ ಎರಡು ಎಕರೆ ಶಾಶ್ವತ ಜಾಗೆಯನ್ನು ಮಂಜೂರು ಮಾಡಬೇಕು ಎಂದು ಸಾರ್ವಜನಿಕರು ಸಭೆಯಲ್ಲಿ ಒತ್ತಾಯಿಸಿದರು.

ಇದಲ್ಲದೇ ಬೆಳವಡಿ ಮಲ್ಲಮ್ಮ ವಸತಿ ಶಾಲೆ ಆರಂಭಿಸಬೇಕು; ಸಂಗೊಳ್ಳಿ ಮಾದರಿಯಲ್ಲಿ ಶಿಲ್ಪವನ ನಿರ್ಮಿಸಬೇಕು ಎಂದು ಸಲಹೆಗಳನ್ನು ನೀಡಿದರು. ಮಲ್ಲಮ್ಮಳ ಸಮಾಧಿಯು ಹಿನ್ನೀರಿನಲ್ಲಿ ಮುಳುಗಡೆಯಾಗಿದೆ. ಗಂಗಾಂಬಿಕೆ–ನೀಲಾಂಬಿಕೆ ಅವರ ಐಕ್ಯಸ್ಥಳದ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಉಪಾಧ್ಯಕ್ಷರಾದ ಸಂಗೀತಾ ಕಿಣೇಕರ, ಉಪ ವಿಭಾಗಾಧಿಕಾರಿ ಪ್ರಭಾವತಿ ಫಕ್ಕೀರಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮದ ಹಿರಿಯರು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಬೆಳಗಾವಿ ವಕೀಲರ ಸಂಘದಲ್ಲಿ ಮತದಾನ

## ಎಲ್ಲಾ ಅಭ್ಯರ್ಥಿಗಳಿಗೆ ಶುಭ ಹಾರೈಸಿದರು : ಮಾಜಿ ಶಾಸಕ ಅನಿಲ ಬೆನಕೆ

ಬೆಳಗಾವಿ: ಬೆಳಗಾವಿ ವಕೀಲರ ಸಂಘ ಅಂದರೆ ಬೆಳಗಾವಿ ವಕೀಲರ ಸಂಘದಚುನಾವಣೆದಿನಾಂಕ 09–02–2024 ರಂದುಜೆ.ಎಮ್.ಎಫ್.ಸಿ. ಬೆಳಗಾವಿಯಲ್ಲಿ ಇಂದು ಬೆಳಗ್ಗೆ 10 ಗಂಟೆಯಿಂದ ನ್ಯಾಯಾಲಯದಲ್ಲಿ ವಕೀಲ ಸಮುದಾಯ ಭವನಆರಂಭವಾಗಿದೆ. ಬೆಳಗಾವಿ ವಕೀಲರ ಸಂಘದಚುನಾವಣೆಗೆಇಂದು ಶುಕ್ರವಾರ ಬೆಳಗ್ಗೆ ಅಭೂತಪೂರ್ವಉತ್ಸಾಹದಿಂದ ಮತದಾನಆರಂಭವಾಗಿದ್ದು, ಇಡೀ ವಕೀಲರ ವಲಯದಲ್ಲಿಭಾರೀಉತ್ಸಾಹ ಹಾಗೂ ಕುತೂಹಲದ ವಾತಾವರಣಗೋಚರಿಸುತ್ತಿದೆ. ಚುನಾವಣೆಗಾಗಿ–ಎಲ್ಲಾ ವಕೀಲರಲ್ಲಿಅಪಾರಉತ್ಸಾಹವಿತ್ತು ಮತ್ತುಅವರ ಪ್ರಚಾರಕ್ಕಾಗಿತಮ್ಮಅಭ್ಯರ್ಥಿಯನ್ನು ಬೆಂಬಲಿಸಲು ಮತಗಟ್ಟೆಯ ಹೊರಗೆ ವಕೀಲರು ಮತ್ತುಜನಸಂದಣಿಕಂಡುಬಂದಿತು.

ಆರಂಭದಲ್ಲಿಇಂದು ಬೆಳಗ್ಗೆ 9.30ರ ಸುಮಾರಿಗೆ ಚುನಾವಣಾಧಿಕಾರಿಗಳು ಹಾಗೂ ಚುನಾವಣಾಕಣದಲ್ಲಿದ್ದ ಅಭ್ಯರ್ಥಿಗಳ ಸಮ್ಮುಖದಲ್ಲಿ ಮತಪೆಟ್ಟಿಗೆಗಳನ್ನು ಸೀಲ ಮಾಡಿ ನಂತರ ಮತದಾನಆರಂಭವಾಯಿತು. ಬಳಿಕ 10 ಗಂಟೆಗೆ ಸುಗಮವಾಗಿ ಮತದಾಣಆರಂಭವಾಗಿದೆ. ಬಳಿಕ ಮಧ್ಯಾಹ್ನದವರೆಗೂ ಮತದಾನ ನಿಧಾನಗತಿಯಲ್ಲಿಕಂಡು ಬಂತು. ಮತದಾನದ ವೇಳೆ ಆಗುವ ತೊಂದರೆತಪ್ಪಿಸಲು ಬೂತಗಳನ್ನು ಹೆಚ್ಚಿಸಲಾಗಿದೆ. ಅಭ್ಯರ್ಥಿಗಳು ಸೇರಿದಂತೆ–ಎಲ್ಲರೂತೃಪ್ತರಾಗಿದ್ದು. ಆರಂಭದಲ್ಲಿ 150 ಮತಗಳು ಚಲಾವಣೆಯಾಗಿವೆಎಂದುಮಾಜಿ ಶಾಸಕ ಅನಿಲ ಬೆನಕೆ ಈ ಮಾಹಿತಿ ನೀಡಿಎಲ್ಲಾ ಅಭ್ಯರ್ಥಿಗಳಿಗೆ ಶುಭ ಹಾರೈಸಿದರು.



ಬೆಳಗಾವಿ ವಕೀಲರ ಸಂಘದಚುನಾವಣೆ–ಎರಡು ವರ್ಷಕ್ಕೊಮ್ಮೆ ನಡೆಯುತ್ತದೆ. ಅದರಂತೆ ಈ ಬಾರಿಯೂ ನಡೆಯುತ್ತಿದ್ದು, ಈ ಬಾರಿಚುನಾವಣಾಕಣದಲ್ಲಿ ಸುಮಾರು 40 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ಮೂವರು ಅಭ್ಯರ್ಥಿಗಳು ಪೈಪೋಟಿ ನಡೆಸುತ್ತಿದ್ದು. ಮತದಾನಜೋರಾಗಿದೆ. ಸ್ವಯಂಪ್ರೇರಿತ ಮತದಾನ ಶಾಂತಿಯುತವಾಗಿ ನಡೆಯುತ್ತಿದೆ. ಇಂದು ಸುಮಾರು 2118 ಮತದಾರರುತಮ್ಮ ಹಕ್ಕು ಚಲಾಯಿಸಲಿದ್ದಾರೆ. ಇಂದು ಸಂಜೆ 5.30 ರವರೆಗೆಚುನಾವಣೆಗೆ ಮತದಾನ ನಡೆಯಲಿದೆ. ಇಂದೇ ಮತಎಣಿಕೆ ನಡೆಯಲಿದ್ದರೂ ಮಧ್ಯರಾತ್ರಿ 12 ಗಂಟೆಗೆ ಫಲಿತಾಂಶ ಪ್ರಕಟವಾಗುವ ಸಾಧ್ಯತೆಇದೆ, ಅಚಿತಿಮ ಫಲಿತಾಂಶ ಪ್ರಕಟವಾದ ಬಳಿಕ ಬೆಳಗಾವಿ ಸಂಘದ ನೂತನಕಾರ್ಯಕಾರಿ ಸಮಿತಿ ನಾಳೆಯಿಂದ ಕಾರ್ಯರಂಭ ಮಾಡಲಿದೆ.

ಚುನಾವಣೆಗೆ ನೇಮಕಗೊಂಡ ಅಧಿಕಾರಿಗಳು ಚುನಾವಣಾ ಮತದಾನಕ್ಕೆ ಮಾಡಲಾಗಿರುವ ವ್ಯವಸ್ಥೆಕುರಿತು ಮಾಹಿತಿ ನೀಡಿದರು. ಅನಾರೋಗ್ಯ ಮತ್ತುಅಂಗವಿಕಲರಿಗೆ ಪ್ರತ್ಯೇಕ ಬೂತಗಳನ್ನು ಮಾಡಲಾಗಿದೆ. ಮತದಾಬ ಅತ್ಯಂತ ಸುಗಮವಾಗಿ ಮತ್ತು ಶಾಂತಿಯುತವಾಗಿ ನಡೆಯುತ್ತಿದೆ. ಸಂಜೆ 5:30ಕ್ಕೆ ಮತದಾನ ಮುಗಿದತಕ್ಷಣ ಮತಎಣಿಕ ನಡೆಯಲಿದೆ. ಚುನಾವಣಾಕಣದಲ್ಲಿ 6 ಸ್ಥಾನಗಳಿಗೆ ಒಟ್ಟು 37 ಅಭ್ಯರ್ಥಿಗಳು ಕಣದಲಿದ್ದಾರೆ. ಈ ಪೈಕಿ ಮೂವರ ನಡುವೆಅಧ್ಯಕ್ಷ ಸ್ಥಾನಕ್ಕೆ ಪೈಪೋಟಿಏರ್ಪಟ್ಟಿದೆ. ಉಪಾಧ್ಯಕ್ಷ ಸ್ಥಾನಕ್ಕೆ 13, ಕಾರ್ಯದರ್ಶಿ ಸ್ಥಾನಕ್ಕೆ 5, ಕಾರ್ಯಾಧ್ಯಕ್ಷ ಸ್ಥಾನಕ್ಕೆ 13 ಹಾಗೂ ಮಹಿಳಾ ಪ್ರತಿನಿಧಿ ಸ್ಥಾನಕ್ಕೆ 5 ಅಭ್ಯರ್ಥಿಗಳು ಕಣದಲ್ಲಿದ್ದಾರೆಎಂದು ಚುನಾವಣಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬೆಳಗಾವಿ ವಕೀಲರ ಸಂಘದಚುನಾವಣೆಯಲ್ಲಿ ಹನ್ನೊಂದು ಸ್ಥಾನಗಳಿಗೆ 37 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಎಸಸಿ ಜೈನ, ಅಡ್. ಎಸ. ಎಸ. ಕಿಡವಸನ್ನವರ ಮತ್ತುಅಡ್ ಸುನಿಲ ಎಸ ಸಾಣಿಕೊಪ್ಪದ ನಡುವೆಚೌಕವಿದೆ. ಕುತೂಹಲಕಾರಿಯಾಗಿ, ಮೂವರ ಹೆಸರುಗಳು ಎಸ ಅಕ್ಷರದಿಂದ ಪ್ರಾರಂಭವಾಗುತ್ತವೆ. ಉಪಾಧ್ಯಕ್ಷ ಸ್ಥಾನಕ್ಕೆ ಏಳು ಮುಂದಿ ಹಾಗೂ ಕಾರ್ಯದರ್ಶಿ ಸ್ಥಾನಕ್ಕೆ ಐದು ಮುಂದಿ ಪೈಪೋಟಿ ನಡೆಸುತ್ತಿದ್ದಾರೆ. ಅದೇರೀತಿ 5 ಕಾರ್ಯಕಾರಿ ಸ್ಥಾನಗಳಿಗೆ 13 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಒಂದುಮಹಿಳಾ ಪ್ರತಿನಿಧಿ ಸ್ಥಾನಕ್ಕೆ ಕಣದಲ್ಲಿರುವ ಅಭ್ಯರ್ಥಿಗಳ ಸಂಖ್ಯೆ 5.

# ಸಾಮಾಜಿಕ ನಾಟಕ ಪ್ರದರ್ಶನ



ಬೆಳಗಾವಿ: ಇದೇ ದಿ. 11 ರವಿವಾರ ಸಾಯಂಕಾಲ 6–30 ಗಂಟೆಗೆ ಕೊನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರ (ಹಳೆ ರೀಝು ಟಾಕೀಜ್) ದಲ್ಲಿ ನಗರದ ರಂಗಸಂಪದದವರು. ಡಾ. ಅರವಿಂದ ಕುಲಕರ್ಣಿ ನಿರ್ದೇಶಿಸಿರುವ, ರಾಜೇಂದ್ರ ಕಾರಂತ ರಚನೆಯ 'ನಾಯಿ ಕಳೆದಿದೆ' ಸಾಮಾಜಿಕ ನಾಟಕ ಪ್ರದರ್ಶನವನ್ನು ಹಮ್ಮಿಕೊಂಡಿದ್ದಾರೆ

ಪದ್ಮಾ ಕುಲಕರ್ಣಿ, ಸ್ನೇಹಾ ಜೋಶಿ, ನಿರ್ಮಲಾ ಬಟ್ಟಲ, ಸ್ನೇಹಾ ಕುಲಕರ್ಣಿ, ಪ್ರಸಾದ ಕಾರಜೋಳ, ವಿನೋದ ಸಪ್ಪಣ್ಣವರ, ಯೋಗೇಶ ದೇಶಪಾಂಡೆ, ಅಶೋಕ ಕುಲಕರ್ಣಿ, ಆರ್ವಿ. ಭಟ್, ರಮೇಶ ಬಡಿಗೇರ, ರಾಜವೀರ ಹಿರೇಮಠ ಮುಂತಾದ ಕಲಾವಿದರು ಈ ನಾಟಕದಲ್ಲಿ ಅಭಿನಯಿಸಲಿದ್ದಾರೆ.

# ಜೀತ ಪದ್ಧತಿ ನಿರ್ಮೂಲನಾ ಕಾರ್ಯಕ್ರಮ

ಬೆಳಗಾವಿ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ ಹಾಗೂ ಸ್ಪಂದನ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ (ಫೆ.09) ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಭಾಂಗಣದಲ್ಲಿ ಜೀತ ಪದ್ಧತಿ ನಿರ್ಮೂಲನಾ ಕಾರ್ಯಕ್ರಮ ನಡೆಯಿತು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಪಿ. ಮುರಳಿ ಮೋಹನ್ ರೆಡ್ಡಿ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಜ್ಞೆ ("ಕರ್ನಾಟಕವನ್ನು ಜೀತ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಸಮುದಾಯಗಳ ಜನರಿಗೆ ನ್ಯಾಯವನ್ನು ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ, ಈ ಮೂಲಕ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಈ ಮೂಲಕ ಪ್ರತಿಜ್ಞೆ ಮಾಡುತ್ತೇನೆ") ಯನ್ನು ತೆಗೆದುಕೊಳ್ಳಲಾಯಿತು.




ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ, ಎಮ್. ಹೊನಕೇರಿ, ಬೆಳಗಾವಿ, ಜಿಲ್ಲಾ ಪಂಚಾಯತ (ಆಡಳಿತ) ಉಪಕಾರ್ಯದರ್ಶಿಗಳು–1 ರೇಖಾ ಡೊಳ್ಳಿನ್ನವರ, ಬೆಳಗಾವಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರಾದ ಎಮ್. ಬಿ. ಅನ್ಸಾರಿ, ವಿನೋದ್ ಕುಮಾರ ಐ.ಜೆ. ಎಮ್, ಬೆಳಗಾವಿ ಕಾರ್ಮಿಕ ಇಲಾಖೆ (ಬಾ.ಕಾ) ಯೋಜನಾ ನಿರ್ದೇಶಕಿ ಜ್ಯೋತಿ ಎಮ್. ಕಾಂತೆ ಉಪಸ್ಥಿತರಿದ್ದರು.

ಸದರಿ ಕಾರ್ಯಕ್ರಮದ ನಂತರ ಜಾಥಾ ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಪಿ. ಮುರಳಿ ಮೋಹನ್ ರೆಡ್ಡಿ ಅವರು ಚಾಲನೆ ನೀಡಿದರು.

# ಲವ್ ಜಿಹಾದ್ ಆರೋಪಿಸಿ ನೈತಿಕ ಪೊಲೀಸ್ ಗಿರಿ: 7 ಮಂದಿ ಬಂಧನ

ಚಿಕ್ಕಮಗಳೂರು: ಲವ್ ಜಿಹಾದ್ ಆರೋಪಿಸಿ ನೈತಿಕ ಪೊಲೀಸ್ ಗಿರಿ ನಡೆಸಿದ್ದ ಆರೋಪದ ಮೇರೆಗೆ ಹಿಂದೂಪರ ಸಂಘಟನೆಯ 7 ಮಂದಿ ಕಾರ್ಯಕರ್ತರನ್ನು ಬಂಧಿಸಲಾಗಿದೆ.



ಚಿಕ್ಕಮಗಳೂರು ಜಿಲ್ಲೆಯ ಆಲ್ದೂರು ತಾಲೂಕಿನ ಆಲ್ದೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅನೈತಿಕ ಪೊಲೀಸ್ ಗಿರಿ ನಡೆದಿದ್ದು, ಅಪ್ರಾಪ್ತ ವಯಸ್ಸಿನ ಯುವತಿಯೊಂದಿಗೆ ತಿರುಗಾಡುತ್ತಿದ್ದ ಆರೋಪದಲ್ಲಿ ಯುವಕನೋರ್ವನನ್ನು ಬಜರಂಗ ದಳ ಕಾರ್ಯಕರ್ತರು ಅಪಹರಿಸಿ ಹಲ್ಲೆ ಮಾಡಿರುವ ಬಗ್ಗೆ ಪೊಲೀಸ್ ದೂರು ದಾಖಲಾಗಿತ್ತು.

ಆಲ್ದೂರು ಪಟ್ಟದ ನಿವಾಸಿ, ಡ್ಯಾನ್ಸ್ ಮಾಸ್ಟರ್ ರುಮಾನ್ ಹಲ್ಲೆಗೊಳಗಾದ ಯುವಕನಾಗಿದ್ದು. ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿ ಬಜರಂಗ ದಳ ಚಿಕ್ಕಮಗಳೂರು ಜಿಲ್ಲಾ ಸಂಚಾಲಕ ಸಿ.ಡಿ.ಶಿವಕುಮಾರ್, ಸ್ವರೂಪ್, ಕಾರ್ತಿಕ್, ಮಧು, ರಂಜಿತ್, ಪರೀಕ್ಷಿತ್ ಹಾಗೂ ಪ್ರಜ್ವಲ್ ಎಂಬವರನ್ನು ಪೊಲೀಸರು ಬಂಧಿಸಿದ್ದಾರೆ.

ವೃತ್ತಿಯಲ್ಲಿ ಡ್ಯಾನ್ಸ್ ಮಾಸ್ಟರ್ ಆಗಿರುವ ತನ್ನನ್ನು ಆರೋಪಿಗಳು ಗುರುವಾರ ಕಾರಿನಲ್ಲಿ ಅಪಹರಿಸಿ ಬಳಿಕ ಕೂಡಿ ಹಾಕಿ ಹಲ್ಲೆ ನಡೆಸಿದ್ದಲ್ಲದೆ, ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ರುಮಾನ್ ಪೊಲೀಸ್ ದೂರಿನಲ್ಲಿ ಆರೋಪಿಸಿದ್ದರು. ಆಲ್ದೂರು ಪಟ್ಟಣದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಪೊಲೀಸರ ಪ್ರಕಾರ, ಡ್ಯಾನ್ಸ್ ಮಾಸ್ಟರ್ ಆಗಿರುವ ರುಮಾನ್ ಅಪ್ರಾಪ್ತ ಬಾಲಕಿಯನ್ನು ಓಲೈಸುತ್ತಿದ್ದ. ವಿಎಚ್‌ಪಿ ಕಾರ್ಯಕರ್ತರ ಗುಂಪು 'ಲವ್ ಜಿಹಾದ್' ಎಂದು ಆರೋಪಿಸಿ ಅವರ ಕಚೇರಿಗೆ ನುಗ್ಗಿತು. ಒಳಗಿನಿಂದ ಬೀಗ ಹಾಕಿ ಆತನ ಮೇಲೆ ಹಲ್ಲೆ ನಡೆಸಿದ್ದಾರೆ.

**ರುಮಾನ್ ವಿರುದ್ಧವೂ ಪ್ರತಿದೂರು:**

ಈ ನಡುವೆ ಅಪ್ರಾಪ್ತ ವಯಸ್ಸಿನ ತನ್ನ ಪುತ್ರಿಯನ್ನು ಮುರ್ಡೇಶ್ವರ, ಬೇಲೂರು, ಮಂಗಳೂರಿಗೆ ಕರೆದೊಯ್ದು ಅತ್ಯಾಚಾರ ಎಸಗಿದ್ದಾನೆ ಎಂದು ಆರೋಪಿಸಿ ಬಾಲಕಿಯ ಪೋಷಕರು ನೀಡಿರುವ ದೂರಿನಂತೆ ರುಮಾನ್ ವಿರುದ್ಧವೂ ಪ್ರಕರಣ ದಾಖಲಾಗಿದೆ. ಬಾಲಕಿಯ ಪೋಷಕರು ಆತನ ವಿರುದ್ಧವೂ ದೂರು ದಾಖಲಿಸಿದ್ದು, ಕಿಡ್ನಾಪ್ ಯತ್ನ ಮತ್ತು ಪ್ರೀತಿಯ ಹೆಸರಿನಲ್ಲಿ ಮೋಸ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

# ನಾಳೆ ವಿದ್ಯುತ್ ವ್ಯತ್ಯಯ

ಬೆಳಗಾವಿ: 110 ಕೆ.ವಿ ಕಣಬರ್ಗಿ ಉಪಕೇಂದ್ರದಲ್ಲಿ ನಾಲ್ಕನೇಯ ತ್ರೈಮಾಸಿಕ ನಿರ್ವಹಣೆ ಕಾರ್ಯದ ಪ್ರಯುಕ್ತ ಸ್ವೀಕರಣಾ ಕೇಂದ್ರದಿಂದ ಬೆಳಗಾವಿ ಕೇಲವು ನಗರದಲ್ಲಿ ಫೆ.11 ರಂದು ಬೆಳಗ್ಗೆ 9 ಗಂಟೆಯಿಂದ ಸಾಯಂಕಾಲ 5 ಘಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಆಗಲಿದೆ

ಆಟೋನಗರದ ಪಿ.ಎಲ್. ನಂ.910 ರಿಂದ ಪಿ.ಎಲ್. ನಂ 1365, ಪಿ.ಎಲ್.ನಂ 1 ರಿಂದ ಪಿ.ಎಲ್.ನಂ 909, ಕಣಬರ್ಗಿ ನಗರ, ರಾಮತೀರ್ಥ ನಗರದ ಪಿ.ಎಲ್.ನಂ 1125 ರಿಂದ ಪಿ.ಎಲ್.ನಂ 4087, ಪಿ.ಎಲ್.ನಂ. 1 ರಿಂದ ಪಿ.ಎಲ್.ನಂ. 1124 ರೆವಿನೀವ್ ಕಾಲೋನಿ, ರೇಣುಕಾ ನಗರ, ಕಾಕತಿ, ಮುತ್ಯಾನಟ್ಟಿ, ಬಸವನಕುಡಚಿ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ ಎಂದು ಬೆಳಗಾವಿ ನಗರ ವಿಭಾಗದ ಕಾರ್ಯ ಮತ್ತು ಪಾಲನೆ, ಕಾರ್ಯನಿರ್ವಾಹ ಅಭಿಯಂತಕರು ತಿಳಿಸಿದ್ದಾರೆ.

## ತಾಂತ್ರಿಕ ಸಹಾಯಕ (ಸಿವ್ಹಿಲ್) ಹುದ್ದೆಗಳಿಗೆ ದಾಖಲಾತಿ ಪರಿಶೀಲನೆಗೆ ಅಂತಿಮ ಅವಕಾಶ

ಬೆಳಗಾವಿ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇಲೆ ತಾಂತ್ರಿಕ ಸಹಾಯಕ (ಸಿವ್ಹಿಲ್) ಹುದ್ದೆಗಳಿಗೆ ಅರ್ಜಿಗಳನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮೂಲ ದಾಖಲಾತಿ ಪರಿಶೀಲನೆಗೆ ಫೆ. 19 ರಂದು ಬೆಳಗ್ಗೆ 11.00 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಾಜರಾಗುವಂತೆ ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

2023ರ ಸಾಲಿನ ಆ.8 ರಿಂದ 21ರ ವರೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇಲೆ ತಾಂತ್ರಿಕ ಸಹಾಯಕ (ಸಿವ್ಹಿಲ್) ಹುದ್ದೆಗಳಿಗೆ ಅರ್ಜಿಗಳನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮೂಲ ದಾಖಲಾತಿ ಪರಿಶೀಲನೆಗೆ ಕಾಲಾವಕಾಶ ನೀಡಿತು. ಅದರಂತೆ ಅವಧಿಯಲ್ಲಿ 624 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಕ್ಷೇಪಣೆಯಲ್ಲಿ ಬಹಳಷ್ಟು ಜನ ಮೂಲ ದಾಖಲಾತಿ ಪರಿಶೀಲನೆ ಮಾಹಿತಿಯ ಕೊರತೆಯಿಂದಾಗಿ ಹಾಜರಾಗಲು ಸಾದ್ಯವಾಗಿಲ್ಲ. ಆದ್ದರಿಂದ ಅರ್ಜಿ ಸಲ್ಲಿಸಿದ ಎಲ್ಲ ಅಭ್ಯರ್ಥಿಗಳಿಗೆ ಮತ್ತೊಮ್ಮೆ ದಾಖಲಾತಿ ಪರಿಶೀಲನೆಗೆ ಅಂತಿಮ ಅವಕಾಶ ನೀಡಲಾಗಿದೆ.

**Online** ದಲ್ಲಿ ನಮೂದಿಸಿದ ಅಂಕಗಳ ಆಧಾರದ ಮೇಲೆ 50 ಜನ ಅಭ್ಯರ್ಥಿಗಳನ್ನು ದಿ: 29–11–23 ರಂದು ಮೂಲ ದಾಖಲಾತಿ ಪರಿಶೀಲನೆಗೆ ಆಹ್ವಾನಿಸಲಾಗಿತ್ತು. 27 ಜನ ಅಭ್ಯರ್ಥಿಗಳು ಹಾಜರಾಗಿದ್ದರು. ಅದರಂತೆ ಜೇಷ್ಠತಾ ಪಟ್ಟಿ ತಯಾರಿಸಿ, ಜ.17–2024 ರಿಂದ ಜ.24–2024 ರ ವರೆಗೆ ಸದರಿ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆ ಕರೆಯಲಾಗಿತ್ತು. ಅಂಕಗಳು ವ್ಯತ್ಯಾಸವಾಗಿರುವ ಬಗ್ಗೆ ಆಕ್ಷೇಪಣೆ ಸ್ವೀಕೃತವಾಗಿದ್ದವು.

ಮಹಾತ್ಮಾ ನರೇಗಾ ಯೋಜನೆಯಡಿ "ತಾಂತ್ರಿಕ ಸಹಾಯಕರು" (ಸಿವ್ಹಿಲ್) ಹುದ್ದೆಗಳಿಗೆ ಜಿಲ್ಲಾ ಪಂಚಾಯತ ವೆಬ್‌ಸೈಟ್ ಮೂಲಕ Online ನಲ್ಲಿ ಅರ್ಜಿ ಸಲ್ಲಿಸಲಾದ 624 ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು ಫೆ. 19 ರಂದು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ.

ಸದರಿ ದಿನದಂದು ಹಾಜರಾಗದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಜೇಷ್ಠತಾ ಪಟ್ಟಿಯಲ್ಲಿ ಪರಿಗಣಿಸಲಾಗುವುದಿಲ್ಲ, ಹಾಗೂ ಯಾವುದೇ ಆಕ್ಷೇಪಣೆಗಳಿಗೆ ಅವಕಾಶ ಇರುವುದಿಲ್ಲವೆಂದು ಅಂತಿಮ ಸೂಚನೆ ನೀಡಲಾಗಿದೆ.

ದಾಖಲಾತಿ ಪರಿಶೀಲನೆಗೆ ತಪ್ಪು ಮಾಹಿತಿ ಒದಗಿಸಿದಲ್ಲಿ ಅಂತಹ ಅಭ್ಯರ್ಥಿಗಳ ವಿರುದ್ದ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂಗಾರು ಹಾಗೂ ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಅರ್ಜಿಗಳಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ 2022–23 ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ತಿರಸ್ಕೃತಗೊಂಡ ಅರ್ಜಿಗಳಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ತಿಳಿಸಲಾಗಿದೆ..

2022–23 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ವಿಮಾ ಸಂಸ್ಥೆಯಿಂದ ತಿರಸ್ಕೃತವಾದ ಒಟ್ಟು 3367 ಹಾಗೂ ಹಿಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ವಿಮಾ ಸಂಸ್ಥೆಯಿಂದ ತಿರಸ್ಕೃತವಾದ ಒಟ್ಟು 648 ಕೇಂದ್ರ ಸರ್ಕಾರದ ಮಾರ್ಗಸೂಚಿಂಯಂತೆ ರೈತರ ಬೆಳೆ ವಿಮೆಗೆ ನೋಂದಣಿಯಾದ ಪ್ರಸ್ತಾವನೆಗಳನ್ನು ಬೆಳೆ ಸಮೀಕ್ಷೆಯ ದತ್ತಾಂಶಗಳೊಂದಿಗೆ ಹೋಲಿಕೆ ಮಾಡಿ ಸರ್ಕಾರದಿಂದ ಅನುಮೋದನೆಯಾದ ವಿನಾಯಿತಿಗಳನ್ನು ಅಳವಡಿಸಿ ತಾಳೆ ಆಗಿರುವ ಪ್ರಸ್ತಾವನೆಗಳಿಗೆ ಸಂರಕ್ಷಣೆ ತಂತ್ರಾಂಶದಲ್ಲಿ ವಿಮಾ ಪರಿಹಾರಕ್ಕಾಗಿ ಲೆಕ್ಕ ಹಾಕಲಾಗಿದೆ.

ತಾಳೆಯಾಗದೆ ಇರುವ ವಿಮೆ ಪ್ರಸ್ತಾವನೆಗಳನ್ನು ಸಕಾರದ ಆದೇಶದಂತೆ ಸಂಬಂಧಪಟ್ಟ ತಾಲೂಕು ಮಟ್ಟದ ಅಧಿಕಾರಿಗಳಿಗೆ ಪರಿಶೀಲಿಸಲು ಸಂರಕ್ಷಣೆ ತಂತ್ರಾಂಶದ ಮೂಲಕ ಕಳುಹಿಸಲಾಗಿತ್ತು. ತಾಲೂಕು ಮಟ್ಟದ ಅಧಿಕಾರಿಗಳು ಈ ಪ್ರಸ್ತಾವನೆಗಳನ್ನು ಪರಿಶೀಲಿಸಿದ ನಂತರ ಅಂತಿಮವಾಗಿ ಸಂಬಂಧಪಟ್ಟ ವಿಮಾ ಸಂಸ್ಥೆಯವರು ಪ್ರಸ್ತಾವನೆಗಳನ್ನು ಪರಿಶೀಲಿಸಿ ಸ್ವೀಕೃತ ಅಥವಾ ತಿರಸ್ಕೃತಮಾಡಿರುತ್ತಾರೆ. ರೈತರು ವಿಮಾ ಅರ್ಜಿ ತಿರಸ್ಕೃತಗೊಂಡ ಬಗ್ಗೆ ಮನವರಿಕೆ ಮಾಡಿಕೊಂಡು ಆಕ್ಷೇಪಣೆ ಇದ್ದಲ್ಲಿ ಮರು ಪರಿಶೀಲಿಸಲು ಮನವಿಗಳನ್ನು 15 ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ವಿಮೆ ಮಾಡಿದ ಬೆಳೆ ಬಗ್ಗೆ2022–23 ರ ಪಹಣಿಯಲ್ಲಿ (RTC) ವಿಮೆಗೆ ನೊಂದಾಯಿಸಿದ ಬೆಳೆ ನಮೂದಾಗಿರಬೇಕು, ಬೆಂಬಲ ಬೆಲೆ ಪ್ರಯೋಜನ ಪಡೆದಿದ್ದಲ್ಲಿ ರಸೀದಿ ಸಲ್ಲಿಸಬೇಕು. ವಿಮೆಗೆ ನೊಂದಾಯಿತ ಬೆಳೆಯ ಉತ್ಪನ್ನವನ್ನು ಎಪಿಎಂಸಿ ಮಾರುಕಟ್ಟೆಗೆ ಮಾರಾಟ ಮಾಡಿದ್ದಲ್ಲಿ ದಾಖಲೆ ಸಲ್ಲಿಸಬೇಕು.ಸದರಿ ದಾಖಲೆಗಳನ್ನು ಸಂಬಂಧಿಸಿದ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ಅಥವಾ ಸಹಾಯಕ ಕೃಷಿ/ತೋಟಗಾರಿಕೆ ನಿರ್ದೇಶಕರ ಕಛೇರಿಗಳಿಗೆ ಸಲ್ಲಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089